# ಉಪದೇಶಕನ ಗ್ರಂಥ

# ಪ್ರಸಂಗಿ

### ಮುನ್ನುಡಿ

"ಉಪದೇಶಕನ ಗ್ರಂಥ" ತತ್ವಜ್ಞಾನಿಯೊಬ್ಬನ ನಿಗೂಢ ಆಲೋಚನೆಗಳನ್ನು ಒಳಗೊಂಡಿದೆ. ಮಾನವನ ಜೀವನ ಎಷ್ಟು ತಾತ್ಕಾಲಿಕ, ಎಷ್ಟು ತದ್ವಿರುದ್ಧ, ಎಷ್ಟೊಂದು ಅನ್ಯಾಯದಿಂದ, ನಿರಾಶೆಗಳಿಂದ ತುಂಬಿದೆ! ಎಂತಲೇ, ಜೀವನ ಬಹಳ ನಿರರ್ಥಕವಾದುದು ಎಂದು ಉಪದೇಶಕನು ತೀರ್ಮಾನಿಸುತ್ತಾನೆ. ಮಾನವ ಜೀವನದ ಗುರಿಯನ್ನು ಸಂಕಲ್ಪಿಸುವ ದೇವರ ಆಲೋಚನೆಯನ್ನು ಅರ್ಥೈಸಿಕೊಳ್ಳಲು ಅಸಾಧ್ಯ. ಆದರೂ, ಮನುಷ್ಯನು ಕಷ್ಟಪಟ್ಟು ಕೆಲಸ ಮಾಡಬೇಕು, ದೇವರ ವರದಾನಗಳನ್ನು ಸಾಕಷ್ಟು ಕಾಲ ಅನುಭವಿಸಬೇಕು ಎಂದು ಸಲಹೆ ನೀಡುತ್ತಾನೆ.

ಈ ತತ್ವಜ್ಞಾನಿಯ ಅನೇಕ ಆಲೋಚನೆಗಳು ನಿಷಿದ್ಧರೂಪದಲ್ಲಿದ್ದು, ಜನರ ಆಸೆ ಆಕಾಂಕ್ಷೆಗಳನ್ನು ವಿಫಲಗೊಳಿಸುವಂತೆ ತೋರುತ್ತವೆ. ಇಂಥ ಅಶುಭ ಅಂಶಗಳನ್ನು ಹಾಗೂ ಸಂದೇಹಾಸ್ಪದ ವಿಷಯಗಳನ್ನು ಬೈಬಲ್ ಗಣನೆಗೆ ತೆಗೆದುಕೊಂಡಿದೆ ಎಂಬುದು ಅದರ ವಿಶಾಲ ಮನೋಭಾವನೆಯನ್ನು ವ್ಯಕ್ತಪಡಿಸುತ್ತದೆ. ಅನೇಕರು ಉಪದೇಶಕನ ಗ್ರಂಥವನ್ನು ಓದಿ, ಅದರಲ್ಲಿ ತಮ್ಮ ಅಭಿಪ್ರಾಯಗಳು ಪ್ರತಿಬಿಂಬಿತವಾಗಿರುವುದನ್ನು ಕಂಡು ಉಪಶಮನ ಪಡೆದಿದ್ದಾರೆ; ಜೀವನವನ್ನು ಹೆಚ್ಚು ಸಾರ್ಥಕಗೊಳಿಸಬಲ್ಲ ದೇವರಲ್ಲಿ ನಂಬಿಕೆ, ಮಾನವನ ಬದುಕನ್ನು ಹೆಚ್ಚು ಹೆಚ್ಚಾಗಿ ಅರ್ಥೈಸಿಕೊಳ್ಳುವ ಸಾಧ್ಯತೆ ಇವುಗಳತ್ತ ಬೈಬಲ್ ಕರೆದೊಯ್ಯುವುದನ್ನು ಮನಗಂಡಿದ್ದಾರೆ.

### ಎಲ್ಲವೂ ಲೊಳಲೊಟ್ಟೆ !

**1** ದಾವೀದನ ಮಗನೂ ಜೆರುಸಲೇಮನ್ನು ಆಳುವ ಅರಸನೂ ಆದ ಉಪದೇಶಕನ ಪ್ರವಚನಗಳು:

2 ಉಪದೇಶಕನು ಹೇಳುವುದನ್ನು ಕೇಳಿ: ವ್ಯರ್ಥಗಳಲ್ಲಿ ವ್ಯರ್ಥ, ವ್ಯರ್ಥವೇ ವ್ಯರ್ಥ, ಎಲ್ಲವೂ
ವ್ಯರ್ಥ! 3ಈ ಲೋಕದಲ್ಲಿ ಮನುಷ್ಯನು ಪಡುವ ಎಲ್ಲಾ ಪ್ರಯಾಸದಿಂದ ಅವನಿಗೆ ದೊರಕುವ ಲಾಭವಾದರೂ
ಏನು? 4ಒಂದು ಸಂತತಿ ಗತಿಸುತ್ತದೆ, ಮತ್ತೊಂದು ಸಂತತಿ ಬರುತ್ತದೆ, ಭೂಮಿಯಾದರೋ ಶಾಶ್ವತವಾಗಿ
ನಿಲ್ಲುತ್ತದೆ. 5ಸೂರ್ಯನು ಮೂಡುತ್ತಾನೆ, ಸೂರ್ಯನು ಮುಳುಗುತ್ತಾನೆ, ತಾನು ಹೊರಟ ಸ್ಥಳಕ್ಕೆ ಮರಳಿ
ಓಡುತ್ತಾನೆ. 6ಗಾಳಿ ದಕ್ಷಿಣಕ್ಕೆ ಬೀಸುತ್ತದೆ, ಉತ್ತರದ ಕಡೆಗೆ ತಿರುಗುತ್ತದೆ, ಸುತ್ತುತ್ತಾ ಸುತ್ತುತ್ತಾ ಹೋಗಿ
ಹಿಂತಿರುಗಿ ಬರುತ್ತದೆ. 7ನದಿಗಳು ಹರಿದು ಸಮುದ್ರವನ್ನು ಸೇರುತ್ತವೆ, ಆದರೂ ಸಮುದ್ರವು ತುಂಬುವುದಿಲ್ಲ,
ಅವು ಎಲ್ಲಿಂದ ಹರಿದು ಬರುತ್ತವೋ ಅಲ್ಲಿಗೆ ಹಿಂತಿರುಗಿ ಹೋಗುತ್ತವೆ. 8ಮನುಷ್ಯನಿಂದ ವಿವರಿಸಲಾಗದಷ್ಟು
ಎಲ್ಲವೂ ನೀರಸ. ಎಷ್ಟು ನೋಡಿದರೂ ಕಣ್ಣಿಗೆ ತೃಪ್ತಿಯಿಲ್ಲ. ಎಷ್ಟು ಕೇಳಿದರೂ ಕಿವಿಗೆ ದಣಿವಿಲ್ಲ. 9ಇದ್ದದ್ದೇ
ಇರುತ್ತದೆ. ನಡೆದದ್ದೇ ನಡೆಯುತ್ತದೆ. ಲೋಕದಲ್ಲಿ ಹೊಸದೇನೂ ಇಲ್ಲ. 10ಇಗೋ, ಹೊಸದು
ಎನಿಸುಕೊಳ್ಳುವ ವಸ್ತು ಇದ್ದರೂ ಅದು ನಮಗಿಂತ ಮುಂಚೆಯೇ ಪುರಾತನ ಕಾಲದಲ್ಲೇ ಇದ್ದುದು.
11ಹಿಂದಿನ ಕಾಲದವರ ಜ್ಞಾಪಕವು ಇಂದಿನವರಿಗಿಲ್ಲ. ಮುಂದಿನ ಕಾಲದವರ ಜ್ಞಾಪಕವು ಅವರಿಗಿಂತ ಮುಂದೆ
ಬರುವವರಿಗೆ ಇರುವುದಿಲ್ಲ.

**ತತ್ವಜ್ಞಾನಿಯ ಅನಿಸಿಕೆ**

12 ಉಪದೇಶಕನಾದ ನಾನು ಜೆರುಸಲೇಮಿನಲ್ಲಿ ಇಸ್ರಯೇಲರಿಗೆ ಅರಸನಾಗಿದ್ದೆ. 13ಆಕಾಶದ ಕೆಳಗೆ ನಡೆಯುವ ಎಲ್ಲಾ ಕಾರ್ಯಗಳನ್ನು ಜ್ಞಾನದಿಂದ ವಿಚಾರಿಸಿದೆ; ವಿಮರ್ಶಿಸಲು ಮನಸ್ಸು ಮಾಡಿದೆ.

ನರಮಾನವರ ಕರ್ತವ್ಯ ಎಂದು ದೇವರು ವಿಧಿಸಿರುವ ಕೆಲಸ ಕಾರ್ಯಗಳೆಲ್ಲ ಕಷ್ಟಕರವಾದುವೇ. 14ಲೋಕದಲ್ಲಿ ನಡೆಯುವ ಎಲ್ಲ ಕಾರ್ಯಕಲಾಪಗಳನ್ನು ಗಮನಿಸಿದ್ದೇನೆ. ಗಾಳಿಯನ್ನು ಹಿಡಿಯಲು ಬೆನ್ನಟ್ಟಿದಂತೆ ಎಲ್ಲವೂ ವ್ಯರ್ಥ. 15ಸೊಟ್ಟವಾದುದನ್ನು ನೆಟ್ಟಗೆ ಮಾಡುವುದು ಅಸಾಧ್ಯ, ಇಲ್ಲವಾದುದನ್ನು ಲೆಕ್ಕ ಹಾಕುವುದು ಅಶಕ್ಯ.

16 ನನ್ನಷ್ಟಕ್ಕೆ ನಾನೇ ಹೀಗೆಂದುಕೊಂಡೆ: “ನನಗಿಂತ ಮೊದಲು ಜೆರುಸಲೇಮನ್ನು ಆಳಿದ ಎಲ್ಲಾ ಅರಸರಿಗಿಂತಲೂ ಹೆಚ್ಚು ಜ್ಞಾನವನ್ನು ಸಂಪಾದಿಸಿಕೊಂಡಿದ್ದೇನೆ. ಜ್ಞಾನ ಹಾಗೂ ತಿಳುವಳಿಕೆಯ ವಿಶೇಷ ಅನುಭವ ನನಗಿದೆ”. 17ಜ್ಞಾನ ಎಂದರೇನು? ಮೂಢತನವೆಂದರೇನು? ಬುದ್ಧಿಹೀನತೆ ಎಂದರೇನು? ಇವುಗಳನ್ನು ಅರಿತುಕೊಳ್ಳಲು ಮನಸ್ಸು ಮಾಡಿದೆ. ಆದರೆ ಇದೂ ಸಹ ಗಾಳಿಯನ್ನು ಹಿಡಿಯಲು ಬೆನ್ನಟ್ಟಿಹೋದಂತೆ ವ್ಯರ್ಥ ಎಂದು ಅರಿತುಕೊಂಡೆ. 18ಅಧಿಕ ಜ್ಞಾನವುಳ್ಳವನಿಗೆ ಅಧಿಕ ವ್ಯಥೆ, ಹೆಚ್ಚು ತಿಳುವಳಿಕೆಯುಳ್ಳವನಿಗೆ ಹೆಚ್ಚು ಸಂಕಟ.

**2** “ಬಾ ಮನವೇ, ಸಂತೋಷದ ಮೂಲಕ ನಿನ್ನನ್ನು ಪರೀಕ್ಷಿಸುವೆ; ಸುಖಭೋಗವನ್ನು ಅನುಭವಿಸು” ಎಂದು ಮನಸ್ಸಿನಲ್ಲೇ ಹೇಳಿಕೊಂಡೆ. ಆದರೆ ಇದೂ ವ್ಯರ್ಥವೇ ಸರಿ. 2“ನಗೆ ಹುಚ್ಚುತನ, ಸುಖಭೋಗ ನಿಷ್ಪ್ರಯೋಜಕ” ಎಂದುಕೊಂಡೆ. 3“ದೇಹಕ್ಕೆ ಮಧುಪಾನ ಮಾಡಿಸೋಣ; ಮೂರ್ಖತನದಲ್ಲಿ ತಲ್ಲೀನನಾಗೋಣ; ಜೀವಮಾನದ ಅಲ್ಪ ಕಾಲದಲ್ಲಿ ನರಮಾನವನಿಗೆ ಧರೆಯಲ್ಲಿ ಯಾವುದು ಹಿತ ಎಂದು ತಿಳಿದುಕೊಳ್ಳೋಣ” ಎಂದು ಜ್ಞಾನಾ ಶಕ್ತನಾದ ನಾನು ಮನಸ್ಸಿನಲ್ಲೇ ಅಂದುಕೊಂಡೆ.

4 ಮಹತ್ಕಾರ್ಯಗಳನ್ನು ಎಸಗಿದೆ: ಮನೆಮಾರುಗಳನ್ನು ಕಟ್ಟಿಸಿಕೊಂಡೆ; 5ತೋಟ ಉದ್ಯಾನ ವನಗಳನ್ನು ಬೆಳೆಸಿದೆ. ಅವುಗಳಲ್ಲಿ ನಾನಾ ತರದ ಫಲವೃಕ್ಷಗಳನ್ನು ನಾಟಿಮಾಡಿಸಿದೆ. 6ಬೆಳೆಯುವ ಗಿಡತೋಟಗಳಿಗೆ ನೀರುಹಾಯಿಸಲು ಕೆರೆಕುಂಟೆಗಳನ್ನು ತೋಡಿಸಿದೆ. 7ಗಂಡು ಹೆಣ್ಣಾಳುಗಳನ್ನು ಕೊಂಡುಕೊಂಡೆ. ಇವರಿಗಾದ ಮಕ್ಕಳು ನನಗೆ ಹುಟ್ಟುಗುಲಾಮರಾದರು. ಇದಲ್ಲದೆ ಜೆರುಸಲೇಮಿನಲ್ಲಿ ಹಿಂದೆ ಇದ್ದವರೆಲ್ಲರಿಗಿಂತಲೂ ಹೆಚ್ಚು ದನಕುರಿಗಳು ನನಗಾದವು; ನಾನು ಧನವಂತನಾದೆ. 8ಬೆಳ್ಳಿಬಂಗಾರಗಳನ್ನೂ ಅರಸರ ಹಾಗೂ ಸಾಮಂತರ ಕಪ್ಪಕಾಣಿಕೆಗಳನ್ನೂ ಶೇಖರಿಸಿಕೊಂಡೆ. ಗಾಯಕಗಾಯಕಿಯರೂ ಭೋಗವಿಲಾಸಕ್ಕಾಗಿ ಹಲವಾರು ಉಪಪತ್ನಿಯರೂ ನನಗಿದ್ದರು.

9 ಹೀಗೆ ಜೆರುಸಲೇಮಿನಲ್ಲಿ ಹಿಂದೆ ಇದ್ದ ಎಲ್ಲರಿಗಿಂತಲೂ ಅಭಿವೃದ್ಧಿಹೊಂದಿ ಶ್ರೀಮಂತನಾದೆ. 10ನನ್ನ ಕಣ್ಣು ಬಯಸಿದ್ದೆಲ್ಲವನ್ನೂ ಅದಕ್ಕೆ ಒಪ್ಪಿಸಿದೆ. ಹೃದಯ ಕೋರಿದ ಸಂತೋಷವನ್ನು ಅದಕ್ಕೆ ನಿರಾಕರಿಸಲಿಲ್ಲ. ನನ್ನ ಮನ ಎಲ್ಲಾ ಕಾರ್ಯಕಲಾಪಗಳಲ್ಲೂ ಉಲ್ಲಾಸಗೊಳ್ಳುತ್ತಿತ್ತು. ಇವೆಲ್ಲ ನನ್ನ ಪ್ರಯಾಸಕ್ಕೆ ದೊರೆತ ಫಲ. 11ಆಗ ನಾನೇ ಸ್ವತಃ ಮಾಡಿದ ಎಲ್ಲಾ ಕೆಲಸಕಾರ್ಯಗಳನ್ನೂ ಪಟ್ಟ ಎಲ್ಲ ಪ್ರಯಾಸವನ್ನೂ ಗಮನವಿಟ್ಟು ಪರಿಶೀಲಿಸಿದೆ. ಆದರೆ ಇಗೋ, ಗಾಳಿಯನ್ನು ಹಿಡಿಯಲು ಬೆನ್ನಟ್ಟಿಹೋದಂತೆ ಎಲ್ಲವೂ ವ್ಯರ್ಥ; ಲೋಕದಲ್ಲಿ ಲಾಭಕರವಾದುದು ಏನೂ ಕಾಣಲಿಲ್ಲ. 12ರಾಜನ ಪ್ರಯತ್ನವೇ ಹೀಗಾದ ಮೇಲೆ ಮತ್ತೊಬ್ಬನಿಂದ ಏನಾದೀತು? ಆದದ್ದೇ ಆಗುತ್ತದೆ ಎಂದುಕೊಂಡೆ.

ಜ್ಞಾನವೆಂದರೇನು? ಮೂಢತನವೆಂದರೇನು? ಬುದ್ಧಿಹೀನತೆ ಎಂದರೇನು? ಇವುಗಳ ಬಗ್ಗೆ ಮತ್ತೆ ಚಿಂತಿಸಿದೆ. 13ಆಗ “ಬೆಳಕು ಕತ್ತಲೆಗಿಂತ ಶ್ರೇಷ್ಠವಾಗಿರುವಂತೆ ಜ್ಞಾನ ಮೂಢತನಕ್ಕಿಂತ ಶ್ರೇಷ್ಠ” ಎಂದು ಗೋಚರವಾಯಿತು. 14“ಜ್ಞಾನಿಗೆ ಹಣೆಯಲ್ಲಿ ಕಣ್ಣು, ಮೂಢನೋ ಕತ್ತಲೆಯಲ್ಲಿ ನಡೆಯುತ್ತಾನೆ”. ಆದರೆ ಇವರಿಬ್ಬರ ಗತಿ ಒಂದೇ ಎಂದು ಕಂಡುಬಂದಿತು. 15“ಮೂಢನಿಗೆ ಸಂಭವಿಸುವ ಗತಿ ನನಗೂ ಸಂಭವಿಸುವುದಾದರೆ ನನ್ನ ಹೆಚ್ಚಿನ ಜ್ಞಾನದಿಂದ ಪ್ರಯೋಜನವೇನು? ಇದೂ ವ್ಯರ್ಥವೇ”! ಎಂದುಕೊಂಡೆ. 16ಏಕೆಂದರೆ ಮೂಢನನ್ನು ಹೇಗೋ ಹಾಗೆಯೇ ಜ್ಞಾನಿಯನ್ನೂ ಜನರು ನಿರಂತರವಾಗಿ

ಮರೆತುಹೋಗುವರು. ಮುಂದಿನ ಕಾಲದವರು ಈಗಿನವರನ್ನೆಲ್ಲ ಮರೆತುಬಿಡುವರು ಎಂಬುದು ನಿಶ್ಚಯ. ನಿಸ್ಸಂದೇಹವಾಗಿ ಮೂಢನಂತೆ ಜ್ಞಾನಿಯು ಮೃತನಾಗುವನು. 17ಲೋಕದ ಆಗುಹೋಗುಗಳು ಕೇಡಿಗೆ ಈಡಾಗುವುವೆಂದು ನನಗೆ ಕಂಡುಬಂದಿತು. ಜೀವನವೇ ನೀರಸವೆಂದು ತೋಚಿತು; ಗಾಳಿಯನ್ನು ಹಿಡಿಯಲು ಬೆನ್ನಟ್ಟಿ ಹೋದಂತೆ ಸಮಸ್ತವೂ ವ್ಯರ್ಥವೇ ಸರಿ!

18 ನನ್ನ ದುಡಿಮೆಯ ಫಲವನ್ನು ಮುಂದಿನವನಿಗೆ ಬಿಟ್ಟುಬಿಡಬೇಕಲ್ಲಾ ಎಂದು ಲೋಕದಲ್ಲಿ ನಾನು ಪಟ್ಟ ಪ್ರಯಾಸದ ಬಗ್ಗೆ ಬೇಸರಗೊಂಡೆ. 19ನನ್ನ ನಂತರ ಬರುವವನು ಜ್ಞಾನಿಯೋ ಮೂಢನೋ ಯಾರಿಗೆ ಗೊತ್ತು? ಅವನು ಎಂಥವನಾದರೂ ನಾನು ಲೋಕದಲ್ಲಿ ಬುದ್ಧಿ ಖರ್ಚು ಮಾಡಿ ಗಳಿಸಿದ ದುಡಿಮೆಯ ಫಲಕ್ಕೆಲ್ಲ ಅವನು ಒಡೆಯನಾಗುತ್ತಾನೆ. ಇದು ಸಹ ವ್ಯರ್ಥವೇ. 20ಹೀಗಿರಲು, ನಾನು ಲೋಕದಲ್ಲಿ ಕಷ್ಟಪಟ್ಟು ಗಳಿಸಿದ ದುಡಿಮೆಯ ಬಗ್ಗೆ ನಿರಾಶೆಗೊಂಡೆ. 21ಒಬ್ಬನು ಜ್ಞಾನದಿಂದಲೂ ತಿಳುವಳಿಕೆ ಇಂದಲೂ ಕೆಲಸಮಾಡಿ ಕಾರ್ಯವನ್ನು ಸಿದ್ಧಿಗೆ ತಂದಮೇಲೆ, ಅದಕ್ಕಾಗಿ ಪ್ರಯಾಸಪಡದವನಿಗೆ ಅದನ್ನು ವಾರಸುದಾರನಾಗಿ ಬಿಡಬೇಕಾಗುತ್ತದೆ. ಇದು ಸಹ ವ್ಯರ್ಥವಲ್ಲವೆ? ಇದು ಅನ್ಯಾಯವಲ್ಲವೇ? 22ಲೋಕದಲ್ಲಿ ಮಾನವನು ಹೃತ್ಪೂರ್ವಕವಾಗಿ ಪಡುವ ಪ್ರಯಾಸದಿಂದ ಅವನಿಗೆ ಸಿಗುವ ಲಾಭವಾದರೂ ಏನು? 23ಅವನ ಮನಸ್ಸಿಗೆ ನೆಮ್ಮದಿ ಇಲ್ಲ. ಇದು ಸಹ ವ್ಯರ್ಥವೇ ಸರಿ.

24 ತಿಂದು, ಕುಡಿದು, ತನ್ನ ದುಡಿಮೆಯಲ್ಲೇ ಸುಖವನ್ನು ಅನುಭವಿಸುವುದಕ್ಕಿಂತ ಮೇಲಾದುದು ಮನುಷ್ಯನಿಗೆ ಯಾವುದು ಇಲ್ಲ. ಇದು ದೇವರಿಂದ ಆದುದು ಎಂದು ಮನಗಂಡೆ. 25ದೇವರಿಲ್ಲದೆ ಯಾರಿಗೆ ಊಟ ದೊರಕೀತು? ಅವರಿಲ್ಲದೆ ಸುಖಾನುಭವ ಯಾರಿಗೆ ದೊರಕೀತು? 26ದೇವರು ತಾವು ಮೆಚ್ಚಿದವನಿಗೆ ಜ್ಞಾನವನ್ನೂ, ತಿಳುವಳಿಕೆಯನ್ನೂ, ಸುಖಸಂತೋಷವನ್ನೂ ದಯಪಾಲಿಸುತ್ತಾರಲ್ಲವೇ? ಪಾಪಿಗಾದರೋ, ಪ್ರಯೋಜನಕರವಾದುವುಗಳನ್ನು ಕೂಡಿಸಿರುವ ಪ್ರಯಾಸವನ್ನು ಮಾತ್ರ ವಿಧಿಸಿದ್ದಾರೆ. ಆದರೆ ಅವು ತಮಗೆ ಮೆಚ್ಚುಗೆಯಾದವರಿಗೆ ಸೇರಬೇಕಾದವು. ಇದೂ ಕೂಡ ಗಾಳಿಯನ್ನು ಹಿಡಿಯಲು ಬೆನ್ನಟ್ಟಿದಂತೆ ವ್ಯರ್ಥ.

### ಒಂದೊಂದಕ್ಕೂ ಸೂಕ್ತ ಸಮಯವುಂಟು

**3** ಪ್ರತಿಯೊಂದು ಕಾರ್ಯಕ್ಕೂ ನಿಗದಿಯಾದ ಕಾಲವಿದೆ. ಜಗತ್ತಿನಲ್ಲಿ ನಡೆಯುವ ಒಂದೊಂದು ಕೆಲಸಕ್ಕೂ ಸೂಕ್ತ ಸಮಯವಿದೆ:

2 ಹುಟ್ಟುವ ಸಮಯ, ಸಾಯುವ ಸಮಯ
ನೆಡುವ ಸಮಯ, ನೆಟ್ಟದ್ದನ್ನು ಕೀಳುವ
ಸಮಯ.
3 ಕೊಲ್ಲುವ ಸಮಯ, ಗುಣಪಡಿಸುವ ಸಮಯ
ಕೆಡವಿಬಿಡುವ ಸಮಯ, ಕಟ್ಟಿ ಎಬ್ಬಿಸುವ
ಸಮಯ.
4 ಅಳುವ ಸಮಯ, ನಗುವ ಸಮಯ
ಗೋಳಾಡುವ ಸಮಯ, ಕುಣಿದಾಡುವ
ಸಮಯ.
5 ಕಲ್ಲುಗಳನ್ನು ಬಿಸಾಡುವ ಸಮಯ
ಕಲ್ಲುಗಳನ್ನು ಕೂಡಿಸಿಡುವ ಸಮಯ
ಆಲಿಂಗನ ಮಾಡುವ ಸಮಯ, ಆಲಿಂಗನ
ಮಾಡದ ಸಮಯ.
6 ಗಳಿಸುವ ಸಮಯ, ಕಳೆದುಕೊಳ್ಳುವ ಸಮಯ
ಕಾಪಾಡುವ ಸಮಯ, ಬಿಸಾಡುವ ಸಮಯ.
7 ಹರಿಯುವ ಸಮಯ, ಹೊಲಿಯುವ ಸಮಯ

ಸುಮ್ಮನಿರುವ ಸಮಯ, ಮಾತಾಡುವ
ಸಮಯ.
8 ಪ್ರೀತಿಸುವ ಸಮಯ, ದ್ವೇಷಿಸುವ ಸಮಯ
ಯುದ್ಧಮಾಡುವ ಸಮಯ, ಸಮಾಧಾನ
ಮಾಡುವ ಸಮಯ.
ಹೀಗೆ ಒಂದೊಂದು ಕೆಲಸಕ್ಕೂ ತಕ್ಕ
ಸಮಯವುಂಟು.

9 ಕಷ್ಟಪಟ್ಟು ಮಾಡುವ ದುಡಿಮೆಯಿಂದ ಒಬ್ಬನಿಗೆ ಸಿಗುವ ಲಾಭವಾದರೂ ಏನು?
10ನರಮಾನವರ ಕರ್ತವ್ಯವೆಂದು ದೇವರು ವಿಧಿಸಿರುವ ದುಡಿಮೆಯನ್ನು ನಾನು ಗಮನಿಸಿದ್ದೇನೆ.
11ಒಂದೊಂದು ವಸ್ತುವನ್ನೂ ಸಮಯಕ್ಕೆ ತಕ್ಕಂತೆ ಸುಂದರವಾಗಿ ನಿರ್ಮಿಸಿದ್ದಾರೆ ದೇವರು. ಇದಲ್ಲದೆ,
ಮನುಷ್ಯನ ಹೃದಯದಲ್ಲಿ ಅಮರತ್ವದ ಪ್ರತಿಯನ್ನು ಮೂಡಿಸಿದ್ದಾರೆ. 12ಮನುಷ್ಯರು ತಮ್ಮ ಇಡೀ
ಜೀವಮಾನದಲ್ಲಿ ಸುಖಸಂತೋಷವನ್ನು ಅನುಭವಿಸುವುದಕ್ಕಿಂತ ಮೇಲಾದುದು ಅವರಿಗೆ ಯಾವುದೂ ಇಲ್ಲ
ಎಂಬುದನ್ನು ನಾನು ಗ್ರಹಿಸಿದ್ದೇನೆ. 13ಅಲ್ಲದೆ, ಪ್ರತಿಯೊಬ್ಬನು ಅನ್ನಪಾನಗಳನ್ನು ಸೇವಿಸಿ, ತನ್ನ ನಾನಾತರದ
ದುಡಿಮೆಗಳಲ್ಲೂ ಸೇವಿಸಿ, ತನ್ನ ನಾನಾತರದ ದುಡಿಮೆಗಳಲ್ಲೂ ಸುಖವನ್ನು ಅನುಭವಿಸುವುದು ದೇವರ
ಅನುಗ್ರಹವೇ ಎಂದು ನನಗೆ ತಿಳಿದಿದೆ.

14 ದೇವರ ಕಾರ್ಯವೆಲ್ಲವು ಶಾಶ್ವತವಾದುದು ಎಂದು ಬಲ್ಲೆ. ಅದಕ್ಕೆ ಯಾವುದನ್ನೂ
ಸೇರಿಸಲಾಗದು. ಅದರಿಂದ ಯಾವುದನ್ನೂ ಕಳೆಯಲಾಗದು. ತಮ್ಮ ಸನ್ನಿಧಿಯಲ್ಲಿ ಮಾನವರು
ಭಯಭಕ್ತಿಯಿಂದ ಇರಬೇಕೆಂಬ ಕಾರಣದಿಂದಲೇ ದೇವರು ಹೀಗೆ ಮಾಡಿದ್ದಾರೆ. 15ಈಗಿನದು ಹಿಂದೆ ಇತ್ತು;
ಮುಂದಿನದು ಈಗಲೂ ಇದೆ; ಗತಿಸಿ ಹೋದದ್ದನ್ನು ದೇವರು ಮರಳಿ ಬರಮಾಡುವರು.

### ವಿಶ್ವದಲ್ಲಿ ಅಧರ್ಮ

16 ಇದಲ್ಲದೆ, ನಾನು ಲೋಕವನ್ನು ದೃಷ್ಟಿಸಿ ನೋಡಿ ನ್ಯಾಯಸ್ಥಾನದಲ್ಲೂ ಧರ್ಮಸ್ಥಾನದಲ್ಲೂ
ಅಧರ್ಮ ಇರುವುದನ್ನು ಗಮನಿಸಿದೆ. 17ಆಗ ನಾನು ಮನಸ್ಸಿನಲ್ಲೇ, "ದೇವರು ಸಜ್ಜನರಿಗೂ ದುರ್ಜನರಿಗೂ
ನ್ಯಾಯ ತೀರಿಸುವರು. ಅವರ ನ್ಯಾಯಕ್ರಮದಲ್ಲಿ ಎಲ್ಲ ಕೆಲಸ ಕಾರ್ಯಗಳಿಗೂ ತಕ್ಕ ಸಮಯ ಉಂಟಲ್ಲವೆ?"
ಎಂದುಕೊಂಡೆ. 18ಮತ್ತೆ ಮನಸ್ಸಿನಲ್ಲೇ ಮಾನವರ ಪರಿಸ್ಥಿತಿಯ ಬಗ್ಗೆ ಆಲೋಚನೆ ಮಾಡಿದೆ; ಮನುಷ್ಯರು
ಪಶುಗಳಿಗೆ ಸಮಾನರೆಂದು ತಾವೇ ಗ್ರಹಿಸಿಕೊಳ್ಳುವುದಕ್ಕೆ ಆಸ್ಪದವಾಗುವಂತೆ ದೇವರು ಮನುಷ್ಯರನ್ನು
ಪರೀಕ್ಷಿಸುತ್ತಾರೆ. 19ಮನುಷ್ಯನ ಗತಿಯೂ ಪಶುವಿನ ಗತಿಯೂ ಒಂದೇ; ಪಶುವಿಗೆ ಸಾವು ಬರುವ ಹಾಗೆ
ಮನುಷ್ಯನಿಗೂ ಬರುತ್ತದೆ. ಎಲ್ಲಕ್ಕೂ ಇರುವ ಪ್ರಾಣ ಒಂದೇ. ಮನುಷ್ಯನು ಪಶುವಿಗಿಂತ ಶ್ರೇಷ್ಠನಲ್ಲ. ಎಲ್ಲವೂ
ವ್ಯರ್ಥವೇ. 20ಎಲ್ಲ ಪ್ರಾಣಿಗಳೂ ಒಂದೇ ಸ್ಥಳಕ್ಕೆ ಹೋಗುತ್ತವೆ. ಎಲ್ಲವೂ ಮಣ್ಣಿನಿಂದ ಆದವು, ಎಲ್ಲವೂ
ಮರಳಿ ಮಣ್ಣಿಗೆ ಸೇರುತ್ತವೆ. 21ಮನುಷ್ಯನ ಆತ್ಮ ಮೇಲಕ್ಕೆ ಏರುತ್ತದೋ? ಪಶುವಿನ ಆತ್ಮ ಕೆಳಕ್ಕೆ ಇಳಿದು
ಭೂಮಿಗೆ ಸೇರುತ್ತದೋ? ಯಾರಿಗೆ ಗೊತ್ತು?" 22ಈ ಪ್ರಕಾರ ನಾನು ಆಲೋಚಿಸಿ ಮನುಷ್ಯನು ತನ್ನ
ಕೆಲಸಕಾರ್ಯಗಳಲ್ಲಿ ಉಲ್ಲಾಸಗೊಳ್ಳುವುದಕ್ಕಿಂತ ಅವನಿಗೆ ಮೇಲಾದುದು ಯಾವುದೂ ಇಲ್ಲ. ಇದೇ ಅವನ
ಪಾಲಿಗೆ ಬಂದುದು ಎಂದು ಗ್ರಹಿಸಿಕೊಂಡೆ. ಜೀವಮಾನದ ನಂತರ ಸಂಭವಿಸುವುದನ್ನು ನೋಡುವುದಕ್ಕೆ
ಮನುಷ್ಯನನ್ನು ಯಾರು ಪುನಃ ಬರಮಾಡುವರು?

**4** ಇದಾದ ಮೇಲೆ ಈ ಜಗದಲ್ಲಿ ಎಲ್ಲಾ ತರದ ಚಿತ್ರಹಿಂಸೆಗಳನ್ನು ಕುರಿತು ಯೋಚಿಸಿದೆ. ಅಯ್ಯೋ, ಹಿಂಸೆಗೆ
ಈಡಾದವರ ಕಣ್ಣೀರನ್ನು ಕುರಿತು ಏನೆಂದು ಹೇಳಲಿ? ಅವರನ್ನು ಸಂತೈಸುವವರು ಯಾರೂ ಇಲ್ಲ.
ಹಿಂಸಾಚಾರಿಗಳು ಶಕ್ತಿಸಾಮರ್ಥ್ಯ ಉಳ್ಳವರು. ಸಂತೈಸುವವರಾದರೋ ಒಬ್ಬರೂ ಇರಲಿಲ್ಲ. 2ಇದನ್ನು ನೋಡಿ

ಜೀವದಿಂದ ಇರುವವರಿಗಿಂತ ಸತ್ತವರೇ ಧನ್ಯರೆಂದು ಹೊಗಳಿದೆ. 3ಹೌದು, ಉಭಯರಿಗಿಂತಲೂ ಇನ್ನೂ ಹುಟ್ಟದೆ, ಜಗದಲ್ಲಿನ ಅಧರ್ಮವನ್ನು ಕಾಣದೆ ಇರುವವನು ಮತ್ತಷ್ಟು ಭಾಗ್ಯವಂತನೆಂದು ತಿಳಿದುಕೊಂಡೆ.

4 ಮಾನವನು ಪಡುವ ಸಮಸ್ತ ಪರಿಶ್ರಮವನ್ನು ಹಾಗೂ ಸಾಧಿಸುವ ಸಕಲ ಕಾರ್ಯಗಳನ್ನು ಅವಲೋಕಿಸಿದೆ. ಇವಕ್ಕೆಲ್ಲ ಪರರ ಬಗ್ಗೆ ಅವನಿಗಿರುವ ಮತ್ಸರವೇ ಕಾರಣವೆಂದು ತೋರಿಬಂತು. ಇದೂ ಕೂಡ ಗಾಳಿಯನ್ನು ಹಿಡಿಯಲು ಬೆನ್ನಟ್ಟಿದಂತೆ ವ್ಯರ್ಥ. 5ಕೈಕಟ್ಟಿಕೊಂಡು ಕುಳಿತುಕೊಳ್ಳುವ ಮೈಗಳ್ಳನಾದ ಮೂಢನಿಗೆ ಅವನ ಒಡಲೇ ಊಟ. 6ಗಾಳಿಯನ್ನು ಹಿಡಿಯಲು ಬೆನ್ನಟ್ಟಿದಂತೆ ಎರಡು ಕೈಹಿಡಿ ವ್ಯರ್ಥ ಪರಿಶ್ರಮಕ್ಕಿಂತ ಒಂದೇ ಕೈಹಿಡಿಯಷ್ಟು ಸಂಪಾದನೆ ಪಡೆದು ನೆಮ್ಮದಿಯಿಂದಿರುವುದು ಲೇಸು.

7 ಲೋಕದಲ್ಲಿ ಮತ್ತೊಂದು ವ್ಯರ್ಥ ವಿಷಯವನ್ನು ಕಂಡೆ. ಒಬ್ಬಂಟಿಗನಾದ ಮನುಷ್ಯನೊಬ್ಬ ಇದ್ದ. ಅವನಿಗೆ ಅಣ್ಣತಮ್ಮಂದಿರು ಇರಲಿಲ್ಲ. ಮಕ್ಕಳುಮರಿ ಇರಲಿಲ್ಲ. ಆದರೂ ಅವನ ದುಡಿಮೆಗೆ ಎಲ್ಲೆ ಇರಲಿಲ್ಲ. ಆಸ್ತಿಪಾಸ್ತಿಯಿಂದ ಅವನ ಕಣ್ಣಿಗೆ ತೃಪ್ತಿ ಇರಲಿಲ್ಲ. 8"ನಾನು ಸುಖಾನುಭವವನ್ನು ತೊರೆದು ಯಾರಿಗೋಸ್ಕರ ಒಂದೇ ಸಮನೆ ದುಡಿಯುತ್ತಾ ಇದ್ದೇನೆ?" ಎಂದುಕೊಂಡ. ಇದೂ ಕೂಡ ವ್ಯರ್ಥ, ಕೇವಲ ಪ್ರಯಾಸವೇ ಸರಿ.

9 ಒಬ್ಬನಿಗಿಂತ ಇಬ್ಬರು ಲೇಸು; ಅವರ ಪ್ರಯಾಸಕ್ಕೆ ಹೆಚ್ಚಿನ ಲಾಭ. 10ಒಬ್ಬನು ಬಿದ್ದರೆ ಇನ್ನೊಬ್ಬನು ಎತ್ತುತ್ತಾನೆ; ಬಿದ್ದಾಗ ಎತ್ತುವವನು ಇಲ್ಲದಿದ್ದರೆ ಅವನ ಗತಿ ದುರ್ಗತಿಯೇ ಸರಿ. 11ಇದಲ್ಲದೆ, ಒಬ್ಬನ ಮಗ್ಗುಲಲ್ಲಿ ಇನ್ನೊಬ್ಬನು ಮಲಗಿಕೊಂಡರೆ ಇಬ್ಬರಿಗೂ ಬೆಚ್ಚಗಾದೀತು! 12ಒಬ್ಬಂಟಿಗನನ್ನು ಜಯಿಸಬಲ್ಲವನಿಗೆ ಇಬ್ಬರು ಕೂಡ ಎದುರಾಗಿ ನಿಲ್ಲಬಹುದು. ಮೂರು ಹುರಿಗಳಿಂದ ಹೆಣೆದ ಹಗ್ಗ ಸುಲಭವಾಗಿ ಕಿತ್ತು ಹೋಗುವುದಿಲ್ಲ.

13 ಬುದ್ಧಿಮಾತಿಗೆ ಕಿವಿಗೊಡದ ಮೂರ್ಖನಾದ ಮುದಿಯರಸನಿಗಿಂತ ಜ್ಞಾನಿಯಾದ ಬಡಯುವಕನೇ ಮೇಲು. 14ಇಂಥ ಯುವಕನೊಬ್ಬನನ್ನು ರಾಜನನ್ನಾಗಿಸಲು ಸೆರೆಮನೆಯಿಂದ ಕರೆ ತರಲಾಯಿತು. ರಾಜ್ಯದಲ್ಲಿ ಒಬ್ಬ ಬಡ ಪ್ರಜೆಯಾಗಿ ಹುಟ್ಟಿದವನು ಆತ. 15ಜಗತ್ತಿನಲ್ಲಿ ಬದುಕಿದ್ದ ಜೀವಂತರೆಲ್ಲರು ರಾಜನಿಗೆ ಪ್ರತಿಯಾಗಿ ನಿಂತ ಆ ಯುವಕನ ಪಕ್ಷವಹಿಸುವುದನ್ನು ಕಂಡೆ. 16ಇವನ ಅಧಿಪತ್ಯಕ್ಕೆ ಒಳಪಟ್ಟ ಜನಜಂಗುಳಿಯ ಸಂಖ್ಯೆ ಅಪಾರವಾಗಿತ್ತು. ಇವನ ನಂತರ ಬಂದವರಾದರೋ ಇವನ ಬಗ್ಗೆ ಅಭಿಮಾನ ತೋರಲಿಲ್ಲ. ಇದು ಸಹ ವ್ಯರ್ಥ, ಗಾಳಿಯನ್ನು ಹಿಡಿಯಲು ಬೆನ್ನಟ್ಟಿದಂತೆ ವ್ಯರ್ಥ.

## ವಾಗ್ದಾನ ಮಾಡಲು ದುಡುಕಬೇಡ

**5** ನೀನು ದೇವಾಲಯವನ್ನು ಪ್ರವೇಶಿಸುವಾಗ ಎಚ್ಚರಿಕೆವಹಿಸು. ಮೂಢರು ಅರ್ಪಿಸುವ ಬಲಿಗಿಂತ ದೇವರ ಸಾನ್ನಿಧ್ಯ ಸೇರಿ ಕಿವಿಗೊಟ್ಟು ಆಲಿಸುವುದು ಲೇಸು. ತಾವು ಮಾಡುವುದು ಸರಿಯಲ್ಲ ಎಂದು ಆ ಮೂಢರಿಗೆ ತಿಳಿಯದು. 2ದುಡುಕಿ ಮಾತನಾಡಬೇಡ. ದೇವರ ಸನ್ನಿಧಿಯಲ್ಲಿ ಮಾತುಕೊಡಲು ಆತುರಪಡಬೇಡ. ದೇವರು ಇರುವುದು ಪರಲೋಕದಲ್ಲಿ, ನೀನಿರುವುದಾದರೋ ಭೂಲೋಕದಲ್ಲಿ. ಆದುದರಿಂದ ನಿನ್ನ ಮಾತುಗಳಿಗೆ ಮಿತಿಯಿರಲಿ.

3 ಚಿಂತೆ ಹೆಚ್ಚಾದರೆ ಕನಸು ಕಾಣಿಸಿಕೊಳ್ಳುತ್ತದೆ. ಮಾತು ಹೆಚ್ಚಾದರೆ ಹುಚ್ಚುತನ ಹೊರ ಬರುತ್ತದೆ.

4 ದೇವರಿಗೆ ನೀನು ಹರಕೆಯನ್ನು ಹೊತ್ತರೆ ತೀರಿಸಲು ತಡಮಾಡಬೇಡ. ದೇವರು ಮೂಢರಿಗೆ ಒಲಿಯುವುದಿಲ್ಲ. ನಿನ್ನ ಹರಕೆಯನ್ನು ತಪ್ಪದೆ ತೀರಿಸು. 5ಹರಕೆಮಾಡಿ ತೀರಿಸದೆ ಇರುವುದಕ್ಕಿಂತ ಹರಕೆ ಮಾಡಿಕೊಳ್ಳದಿರುವುದೇ ಲೇಸು. 6ನಿನ್ನ ಬಾಯಿ ಪಾಪಕ್ಕೆ ಕಾರಣ ಆಗದಂತೆ ನೋಡಿಕೊ. ಅದು ಅಜಾಗ್ರತೆಯಿಂದ ಆಯಿತೆಂದು ದೇವದೂತನ ಮುಂದೆ ನೆಪ ಹೇಳಬೇಡ. ದೇವರು ನಿನ್ನ ಮಾತಿಗೆ ಕೋಪಗೊಂಡು ನಿನ್ನ ಕೆಲಸವನ್ನು ಹಾಳು ಮಾಡಿಯಾರು. 7ಕನಸುಗಳು ಎಷ್ಟೋ ಬೀಳಬಹುದು. ಮಾತುಕತೆಗಳು ಎಷ್ಟೋ ನಡೆಯಬಹುದು. ನೀನಾದರೋ ದೇವರಲ್ಲಿ ಭಯಭಕ್ತಿಯುಳ್ಳವನಾಗಿರು.

## ಜೀವನ ನಿರರ್ಥಕ

8 ನಾಡಿನಲ್ಲಿ ಬಡವರ ಶೋಷಣೆಯನ್ನೂ ನ್ಯಾಯನೀತಿಯ ಉಲ್ಲಂಘನೆಯನ್ನೂ ನೀನು ನೋಡಿದರೆ ಆಶ್ಚರ್ಯಪಡಬೇಡ. ಒಬ್ಬ ಅಧಿಕಾರಿಯ ಮೇಲೆ ಇನ್ನೊಬ್ಬ ಅಧಿಕಾರಿ ಉಸ್ತುವಾರಿ ನಡೆಸುತ್ತಾನೆ. ಆ ಇಬ್ಬರು ಅಧಿಕಾರಿಗಳ ಮೇಲೆ ಇನ್ನೂ ಉನ್ನತ ಅಧಿಕಾರಿಗಳು ಇದ್ದಾರೆ.

9 "ಸಾರ್ವಜನಿಕ ಒಳಿತು," "ಅಧಿಪತಿಗಳ ಸೇವೆ" ಎಂದೆಲ್ಲ ಹೇಳುವರು. 10ಹಣದಾಸೆಯುಳ್ಳ ವನಿಗೆ ಎಷ್ಟು ಹಣ ಇದ್ದರೂ ತೃಪ್ತಿಯಿಲ್ಲ. ಆಸ್ತಿ ಬಯಸುವವನಿಗೆ ಎಷ್ಟು ಆದಾಯವಿದ್ದರೂ ನೆಮ್ಮದಿಯಿಲ್ಲ. ಇದೂ ಸಹ ವ್ಯರ್ಥವೇ. 11ಸಿರಿಸಂಪತ್ತು ಹೆಚ್ಚಿದಂತೆ ಅನುಭವಿಸುವವರ ಸಂಖ್ಯೆಯೂ ಹೆಚ್ಚುತ್ತದೆ. ಯಜಮಾನನಿಗೆ ತಾನು ಐಶ್ವರ್ಯವಂತನೆಂಬ ಭಾವನೆಯ ಹೊರತು ಮತ್ತಾವ ಲಾಭವು ಇಲ್ಲ. 12ದುಡಿಯುವವನು ಸ್ವಲ್ಪ ತಿಂದರೂ ಸರಿ, ಹೆಚ್ಚು ತಿಂದರೂ ಸರಿ, ಹಾಯಾಗಿ ನಿದ್ರಿಸುತ್ತಾನೆ. ಐಶ್ವರ್ಯವಂತನ ಸಂಪತ್ತಾದರೋ ಅವನಿಗೆ ನಿದ್ರೆ ಬರಲು ಬಿಡುವುದಿಲ್ಲ.

13 ಲೋಕದಲ್ಲಿ ನಾನು ಮತ್ತೊಂದು ಕೇಡನ್ನು ಕಂಡೆ. ಅದೇನೆಂದರೆ, ಆಸ್ತಿವಂತನು ತನ್ನ ಆಸ್ತಿಯನ್ನು ಕಾಪಾಡುವುದರಲ್ಲೇ ಕೊರಗುತ್ತಿರುತ್ತಾನೆ. 14ಆ ಆಸ್ತಿ ನಿರರ್ಥಕ ಪ್ರಯತ್ನದಿಂದ ನಷ್ಟವಾಗುತ್ತದೆ. ಅವನಿಗೆ ಮಗನಿದ್ದರೆ, ಅವನಿಗೆ ಏನೂ ಇರುವುದಿಲ್ಲ. 15ತಾಯಿಯ ಗರ್ಭದಿಂದ ಹೇಗೆ ಬರಿಗೈಯಲ್ಲಿ ಬಂದನೋ ಹಾಗೇ ಬರಿಗೈಯಲ್ಲಿ ಗತಿಸಿಹೋಗುತ್ತಾನೆ. ಅವನು ಪಟ್ಟ ಎಲ್ಲ ಪ್ರಯಾಸಕ್ಕಾಗಿ ತನ್ನ ಕೈಯಲ್ಲಿ ಏನನ್ನೂ ತೆಗೆದುಕೊಂಡು ಹೋಗುವುದಿಲ್ಲ. 16ಬಂದಂತೆಯೇ ಹಿಂದಿರುಗಿ ಹೋಗುವನು. ಅವನು ಪಟ್ಟ ಪ್ರಯಾಸವೆಲ್ಲ ಗಾಳಿಗೆ ತೂರಿದಂತೆ ನಿರರ್ಥಕ, ಇದು ದುರದೃಷ್ಟಕರ. 17ಅವನ ಜೀವಮಾನವೆಲ್ಲ ಅಂಧಕಾರಮಯ, ಅದರಲ್ಲಿ ದುಃಖದುಗುಡ, ರೋಗರುಜಿನ, ಕೋಪತಾಪ ಇದ್ದೇ ಇರುತ್ತವೆ.

18 ಇಗೋ, ನನಗೆ ಕಂಡು ಬಂದ ಇನ್ನೊಂದು ವಿಷಯ: ದೇವರು ಮನುಷ್ಯನಿಗೆ ದಯಪಾಲಿಸಿರುವ ಅಲ್ಪಕಾಲಾವಧಿಯಲ್ಲಿ ಅವನು ತಿಂದು ಕುಡಿಯಬೇಕು. ಲೋಕದಲ್ಲಿ ಪಡಬೇಕಾದ ದುಡಿಮೆಯಲ್ಲೂ ಸುಖವನ್ನು ಅನುಭವಿಸಬೇಕು. ಇದು ಅವನಿಗೆ ಉಚಿತವಾದುದು, ಉತ್ತಮವಾದುದು. ಇದೇ ಅವನಿಗೆ ಬಂದಿರುವ ಪಾಲು. 19ದೇವರು ಯಾರಿಗಾದರು ಆಸ್ತಿಪಾಸ್ತಿಯನ್ನು ದಯಪಾಲಿಸಿ, ಅದನ್ನು ಅನುಭವಿಸುವ, ಪಾಲಿಗೆ ಬಂದದ್ದನ್ನು ಸವಿಯುವ, ಶ್ರಮದಲ್ಲೂ ಸಂತೋಷಪಡುವ ಶಕ್ತಿಯನ್ನು ಕೊಟ್ಟಿದ್ದರೆ ಅದು ಅವನ ಭಾಗ್ಯ; ಅದು ದೇವರ ಅನುಗ್ರಹವೇ ಸರಿ. 20ಇಂಥವನು ತನ್ನ ಜೀವನಾವಧಿಯನ್ನು ಗಣನೆಗೆ ತಂದುಕೊಳ್ಳನು. ಕಾರಣ, ಅವನು ತನ್ನ ಹೃದಯಾನಂದದಲ್ಲೇ ಮಗ್ನನಾಗಿರುವಂತೆ ದೇವರು ಮಾಡಿದ್ದಾರೆ.

**6** ಧರೆಯಲ್ಲಿ ಮಾನವರಿಗೆ ಬಂದೊದಗುವ ದೊಡ್ಡ ದುರವಸ್ಥೆ ಒಂದನ್ನು ಕಂಡೆ. 2ಅದೇನು ಎಂದರೆ, ದೇವರು ಒಬ್ಬನಿಗೆ ಧನಸಂಪತ್ತನ್ನೂ ಘನತೆಗೌರವವನ್ನೂ ಅನುಗ್ರಹಿಸುತ್ತಾರೆ. ಅವನ ಇಷ್ಟಾರ್ಥಕ್ಕೆ ಯಾವ ಕೊರತೆಯೂ ಇಲ್ಲದಂತೆ ಮಾಡುತ್ತಾರೆ. ಆದರೆ ಅವನ್ನು ಅನುಭವಿಸುವುದಕ್ಕೆ ಶಕ್ತಿಯನ್ನು ದೇವರು ಅವನಿಗೆ ಕೊಡುವುದಿಲ್ಲ. ಅವುಗಳನ್ನು ಮತ್ತೊಬ್ಬನು ಅನುಭವಿಸುತ್ತಾನೆ. ಇದೂ ಸಹ ನಿರರ್ಥಕ; ದೊಡ್ಡ ಪಿಡುಗು. 3ಒಬ್ಬನು ನೂರಾರು ಮಕ್ಕಳನ್ನು ಪಡೆಯಬಹುದು, ಹಣ್ಣು ಹಣ್ಣು ಮುದುಕನಾಗುವ ತನಕ ಬದುಕಬಹುದು. ಆದರೆ ಜೀವನದಲ್ಲಿ ಸುಖಾನುಭವ ಇಲ್ಲದೆ, ಉತ್ತರಕ್ರಿಯೆಯೂ ಇಲ್ಲದೆ ಹೋದರೆ ಏನು ಪ್ರಯೋಜನ? ಅವನಿಗಿಂತ ಗರ್ಭಸ್ರಾವದ ಪಿಂಡವೇ ಮೇಲು ಎಂದುಕೊಂಡೆ. 4ಅದು ವ್ಯರ್ಥವಾಗಿ ಬರುತ್ತದೆ. ಕತ್ತಲಲ್ಲೇ ಮರೆಯಾಗುತ್ತದೆ. ಅದರ ಹೆಸರು ಕಾರಿರುಳು. 5ಅದು ಸೂರ್ಯನನ್ನು ಕಂಡಿಲ್ಲ. ತಿಳುವಳಿಕೆಯೆಂಬುದು ಅದಕ್ಕೆ ಇಲ್ಲವೇ ಇಲ್ಲ. ಆದರೂ ಅದರ ನೆಮ್ಮದಿ ಸುಖಾನುಭವ ಇಲ್ಲದವನ ಪರಿಸ್ಥಿತಿಗಿಂತ ಮಿಗಿಲಾದುದು. 6ಸಾವಿರ ವರ್ಷದ ಮೇಲೆ ಸಾವಿರ ವರ್ಷ ಬದುಕಿಯೂ ಸುಖವನ್ನು ಅನುಭವಿಸದಿದ್ದರೆ ಏನು ಪ್ರಯೋಜನ? ಇವೆರಡೂ ಒಂದೇ ಸ್ಥಳಕ್ಕೆ ಹೋಗುತ್ತವೆ, ಅಲ್ಲವೇ?

7 ಮಾನವನು ಪಡುವ ಪ್ರಯಾಸವೆಲ್ಲ ಅವನ ಹೊಟ್ಟೆಪಾಡಿಗಾಗಿಯೇ. ಆದರೂ ಅವನಿಗೆ ತೃಪ್ತಿಯಿಲ್ಲ. 8ಜ್ಞಾನಿಯಾಗಲಿ, ಜನರ ಮುಂದೆ ಸಜ್ಜನನಾಗಿ ನಡೆಯಬಲ್ಲ ಬಡವನಾಗಲಿ, ಮೂಢನಿಗಿಂತ

ಹೇಗೆ ಶ್ರೇಷ್ಠ? 9ಬಗೆಬಗೆಯಾಗಿ ಬಯಸುವುದಕ್ಕಿಂತ ಕಣ್ಣೆದುರಿಗೆ ಇರುವುದನ್ನು ಅನುಭವಿಸುವುದೇ ಲೇಸು. ಆದರೆ ಇದೂ ಕೂಡ ಗಾಳಿಯನ್ನು ಹಿಡಿಯಲು ಬೆನ್ನಟ್ಟಿದಂತೆ ನಿರರ್ಥಕ.

10 ಈಗ ಇರುವ ಪ್ರತಿಯೊಂದು ಹಿಂದಿನಿಂದಲೇ ಹೆಸರುವಾಸಿಯಾಗಿದೆ. ಮನುಷ್ಯನು ಯಾರೆಂದು ಗೊತ್ತಿದೆ. ತನಗಿಂತ ಬಲಿಷ್ಠನ ಸಂಗಡ ವಾದಿಸಲು ಅವನಿಂದಾಗದು. 11ಮಾತು ಹೆಚ್ಚಿದಷ್ಟೂ ಪರಿಣಾಮ ಕಡಿಮೆ. ಅದರಿಂದ ಮನುಷ್ಯನಿಗಾಗುವ ಪ್ರಯೋಜನವಾದರೂ ಏನು? 12ನೆರಳಿನಂತೆ ವ್ಯರ್ಥವಾಗಿ ಕಳೆದುಹೋಗುವ ಮಾನವನ ಜೀವಮಾನ ದಿನಗಳಲ್ಲೆಲ್ಲಾ ಅನಿಗೆ ಯಾವುದು ಹಿತವೆಂದು ಯಾರಿಗೆ ಗೊತ್ತು? ತಾನು ಕಾಲವಾದ ಮೇಲೆ ಇಹಲೋಕದಲ್ಲಿ ಏನಾಗುವುದೆಂದು ಅವನು ಯಾರಿಂದ ತಿಳಿದಕೊಳ್ಳಲು ಸಾಧ್ಯ?

## ಬಾಳನ್ನು ಕುರಿತ ಅನಿಸಿಕೆಗಳು

**7** ಸುಗಂಧ ತೈಲಕ್ಕಿಂತ ಒಳ್ಳೆಯ ಹೆಸರು ಲೇಸು ಜನನದ ದಿನಕ್ಕಿಂತ ಮರಣದ ದಿನ ಲೇಸು.

2 ಔತಣ ನಡೆವ ಮನೆಗೆ ಹೋಗುವುದಕ್ಕಿಂತ ಗೋಳಾಟವಿರುವ ಮನೆಗೆ ಹೋಗುವುದು ಲೇಸು, ಎಲ್ಲಾ ಮಾನವರ ಅಂತಿಮ ಗತಿ ಸಾವೇ. ಜೀವಂತರು ಇದನ್ನು ಮನಸ್ಸಿನಲ್ಲಿಡುವರು.

3 ನಗೆಗಿಂತ ಅಳುವು ಲೇಸು; ಮುಖದಲ್ಲಿ ದುಃಖ, ಹೃದಯಕ್ಕೆ ಸುಖ.

4 ಜ್ಞಾನಿಯ ಹೃದಯ ಶೋಕದ ಆಲಯ; ಮೂಢನ ಹೃದಯ ಹಿಗ್ಗಿನ ನಿಲಯ.

5 ಅಜ್ಞಾನಿಗಳ ಸ್ತುತಿಗೀತೆಗಿಂತ ಸುಜ್ಞಾನಿಗಳ ಗದರಿಕೆ ಲೇಸು.

6 ಮೂಢರ ನಗೆಚಾಟಿಕೆ, ಮಡಕೆಯಡಿ ಉರಿವ ಮುಳ್ಳುಕಡ್ಡಿಯ ಚಟಪಟ. ಇದೂ ಸಹ ನಿರರ್ಥಕ.

7 ದಬ್ಬಾಳಿಕೆ ಬುದ್ಧಿವಂತನನ್ನೂ ಹುಚ್ಚನನ್ನಾಗಿಸುತ್ತದೆ; ಲಂಚಕೋರತನ ಅಂತರಂಗವನ್ನೂ ಕೆಡಿಸುತ್ತದೆ.

8 ಆದಿಗಿಂತ ಅಂತ್ಯಲೇಸು; ಗರ್ವಕ್ಕಿಂತ ತಾಳ್ಮೆ ಲೇಸು.

9 ತವಕಬೇಡ ಕೋಪಮಾಡಲಿಕ್ಕೆ; ಕೋಪಕ್ಕೆ ನೆಲೆ ಮೂಢನ ಎದೆ.

10 ಹಿಂದಿನ ಕಾಲ ಈ ಕಾಲಕ್ಕಿಂತ ಮೇಲಾದುದಕ್ಕೆ ಕಾರಣ ಕೇಳಬೇಡ; ಇದು ಬುದ್ಧಿವಂತನು ಕೇಳುವ ಪ್ರಶ್ನೆಯಲ್ಲ.

11 ಜ್ಞಾನವು ಆಸ್ತಿಗಿಂತ ಪ್ರಯೋಜನಕರ; ಜೀವಿತರಿಗೆ ಅದು ಎಷ್ಟೋ ಲಾಭಕರ. 12ಧನವು ಹೇಗೋ ಹಾಗೆ ಜ್ಞಾನವೂ ಆಶ್ರಯ; ಜ್ಞಾನದ ವೈಶಿಷ್ಟ್ಯವೆಂದರೆ ಅದು ಜ್ಞಾನಿಗೆ ಜೀವದಾಯಕ.

13 ದೇವರ ಸೃಷ್ಟಿಕಾರ್ಯವನ್ನು ಗಮನಿಸು; ಅವರು ಸೊಟ್ಟಗೆ ಮಾಡಿದ್ದನ್ನು ನೆಟ್ಟಗೆ ಮಾಡುವವರು ಯಾರು? 14ಸುಖದಿನದಲ್ಲಿ ಸಂತೋಷದಿಂದಿರು, ದುಃಖದಿನದಲ್ಲಿ ಆಲೋಚಿಸಿ ನೋಡು; ಮನುಷ್ಯನು ತನ್ನ ಆಯುಸ್ಸು ಕಳೆದ ಮೇಲೆ ಸಂಭವಿಸುವುದೇನೆಂದು ಗ್ರಹಿಸಲಾಗದಂತೆ ದೇವರು ಇವುಗಳನ್ನು ಒಂದರ ಮೇಲೊಂದನ್ನು ಬರಮಾಡುತ್ತಾರೆ.

15 ಸಜ್ಜನನು ಸದ್ಧರ್ಮಿಯಾಗಿ ಜೀವಿಸುತ್ತಾ ಗತಿಸಿಹೋಗುತ್ತಾನೆ; ದುರ್ಜನನಾದರೋ ಅಧರ್ಮದಲ್ಲಿ ಬಹುಕಾಲ ಬದುಕುತ್ತಾನೆ. ಇದನ್ನು ಎಲ್ಲಾ ನನ್ನ ನಿರರ್ಥಕ ಜೀವನದಲ್ಲಿ ಎಷ್ಟೋ ನೋಡಿದ್ದೇನೆ. 16ಧರ್ಮಿಷ್ಠನಾಗಿ ಬಾಳುವುದರಲ್ಲಿ ಆಗಲಿ, ಜ್ಞಾನಾರ್ಜನೆಯಲ್ಲಾಗಲಿ ಮಿತಿ ಮೀರಿ ವರ್ತಿಸಬೇಡ; ನಿನ್ನನ್ನು ನೀನೇ ವಿನಾಶಕ್ಕೆ ಗುರಿಮಾಡಿಕೊಳ್ಳಬೇಡ. 17ದುರ್ನಡತೆಯಲ್ಲೇ ಆಗಲಿ, ಬುದ್ಧಿ ಹೀನತೆಯಲ್ಲೇ ಆಗಲಿ ಮಿತಿಮೀರಿ ವರ್ತಿಸುವುದು ಸಲ್ಲ. ಕಾಲ ಬರುವ ಮೊದಲೇ ಸಾವಿಗೆ ತುತ್ತಾಗಬೇಡ. 18ನೀನು ಒಂದನ್ನು ಹಿಡಿದುಕೊಂಡು ಇನ್ನೊಂದನ್ನೂ ಕೈ ಬಿಡದಿರುವುದು ಒಳಿತು. ದೇವರಲ್ಲಿ ಭಯಭಕ್ತಿಯುಳ್ಳವರು ಇವರೆಡರಿಂದಲೂ ಪಾರು.

19 ಹತ್ತು ಅಧಿಕಾರಿಗಳಿಂದ ಪಟ್ಟಣಕ್ಕೆ ಉಂಟಾಗುವ ದೃಢತೆಗಿಂತ ಜ್ಞಾನಿಗೆ ಜ್ಞಾನದಿಂದ ದೊರಕುವ ದೃಢತೆ ಹೆಚ್ಚು.

20 ಪಾಪ ಮಾಡದೆ ಧರ್ಮವನ್ನೇ ಆಚರಿಸುವ ಸತ್ಪುರುಷ ಜಗದಲ್ಲಿ ಇಲ್ಲವೇ ಇಲ್ಲ.

21 ಜನರು ಆಡುವ ಮಾತುಗಳನ್ನೆಲ್ಲ ಲಕ್ಷ್ಯಕ್ಕೆ ತೆಗೆದುಕೊಳ್ಳಬೇಡ. ನಿನ್ನ ಆಳೂ ನಿನ್ನನ್ನು ಶಪಿಸುವುದು ಕಿವಿಗೆ ಬೀಳಬಹುದು.

22 ನೀನು ಕೂಡ ಅನೇಕ ವೇಳೆ ಇತರರನ್ನು ಶಪಿಸಿದ್ದೀ; ಇದಕ್ಕೆ ನಿನ್ನ ಮನಸ್ಸೇ ಸಾಕ್ಷಿ.

23 ಇದನ್ನೆಲ್ಲ ಜ್ಞಾನದಿಂದ ಪರೀಕ್ಷಿಸಿದೆ, ಜ್ಞಾನಿಯಾಗುತ್ತೇನೆಂದು ನಿರ್ಧರಿಸಿಕೊಂಡೆ. ಆದರೆ ಅದು ನನಗೆ ದೂರವಾಯಿತು.

24 ಮಹೋನ್ನತವೂ ನಿಗೂಢವೂ ಆದ ತತ್ವವನ್ನು ಅರಿತುಕೊಳ್ಳಬಲ್ಲವರಾರು? 25ನಾನು ಮತ್ತೆ ಜ್ಞಾನವನ್ನೂ ಮೂಲತತ್ವವನ್ನೂ ಹುಡುಕಿ, ವಿಚಾರಿಸಿ, ಗ್ರಹಿಸಿಕೊಳ್ಳಲು ಆಶಿಸಿದೆ; ಅಧರ್ಮವು ಮೂಢತನ, ಅಜ್ಞಾನವು ಹುಚ್ಚುತನ ಎಂದು ತಿಳಿದುಕೊಳ್ಳಲು ಮನಸ್ಸುಮಾಡಿದೆ.

26 ಸಾವಿಗಿಂತ ಹೆಚ್ಚು ವಿಷಕರವಾದ ವಿಷಯವೊಂದು ನನಗೆ ಕಂಡುಬಂದಿತು. ಅದು ಯಾವುದೆಂದರೆ – ಕೆಟ್ಟ ಹೆಂಗಸು. ಅವಳು ತೋರಿಸುವ ಪ್ರೀತಿ ಒಂದು ಬೋನು, ಸಿಕ್ಕಿಸಿಕೊಳ್ಳುವ ಒಂದು ಬಲೆ; ಅವಳ ತೋಳುಗಳು ಸಂಕೋಲೆಗಳು. ದೇವರು ಒಲಿದವನು ಅವಳಿಂದ ತಪ್ಪಿಸಿಕೊಳ್ಳುವನು; ಪಾಪಿಯಾದರೋ ಅವಳ ಕೈಗೆ ಸಿಕ್ಕಿಬೀಳುವನು. 27 "ಹೌದು, ಒಂದಾದ ಮೇಲೊಂದನ್ನು ಆಲೋಚಿಸಿ ನಾನು ಇದನ್ನು ಕಂಡುಹಿಡಿದೆ" ಎನ್ನುತ್ತಾನೆ ಉಪದೇಶಕ. ಮತ್ತೊಂದು ಸಂಶೋಧನೆಯನ್ನು ಎಷ್ಟು ನಡೆಸಿದರೂ ನನಗೆ ಉತ್ತರ ಸಿಕ್ಕಲಿಲ್ಲ. 28ಸಹಸ್ರ ಪುರುಷರಲ್ಲಿ ಯೋಗ್ಯ ಎನ್ನತಕ್ಕ ಒಬ್ಬನನ್ನು ಕಂಡಿದ್ದರೂ ಕಂಡಿರಬಹುದು; ಮೇಲಾದ ಹೆಂಗಸು ಎನ್ನತಕ್ಕವಳು ಸಿಕ್ಕಲಿಲ್ಲ. 29ಇದೊಂದು ನಿನಗೆ ತಿಳಿದಿರಲಿ: ದೇವರು ಮನುಷ್ಯರನ್ನು ಸಜ್ಜನರನ್ನಾಗಿ ಸೃಷ್ಟಿಸಿದರು; ಮನುಷ್ಯರಾದರೂ ಅನೇಕ ಸಮಸ್ಯೆಗಳನ್ನು ಕಲ್ಪಿಸಿಕೊಂಡಿದ್ದಾರೆ. ನನಗೆ ಕಂಡುಬಂದುದು ಇದುವೇ.

**8** ಜ್ಞಾನಿಗೆ ಸಮಾನರು ಯಾರು? ಅವನಲ್ಲದೆ ಬಗೆಹರಿಸಬಲ್ಲವರು ಯಾರು? ಜ್ಞಾನವು ಮನುಷ್ಯನ ಮುಖವನ್ನು ವಿಕಾಸಗೊಳಿಸುತ್ತದೆ; ಗಂಟುಮೋರೆಯನ್ನು ಮಾರ್ಪಡಿಸುತ್ತದೆ.

### ಅರಸನಿಗೆ ಬಗ್ಗಿನಡೆ

2 ದೇವರ ಮೇಲೆ ಇಟ್ಟ ಆಣೆಯ ನಿಮಿತ್ತ ಅರಸನ ಆಜ್ಞೆಯನ್ನು ಕೈಗೊಳ್ಳಬೇಕೆಂಬುದು ನನ್ನ ಬೋಧೆ. 3ದುಡುಕುತನದಿಂದ ಅರಸನಿಗೆ ಬೆನ್ನು ತೋರಿಸಬೇಡ; ಕೆಟ್ಟ ವಿಷಯದಲ್ಲಿ ಹಟಮಾಡಬೇಡ. ಆತನು ತನಗಿಷ್ಟ ಬಂದಂತೆ ಮಾಡಬಲ್ಲನು. 4ಅರಸನ ಮಾತು ಅಧಿಕಾರದಿಂದ ಕೂಡಿದೆ. "ನೀನು ಮಾಡುವುದೇನು?" ಎಂದು ಅವನನ್ನು ಪ್ರಶ್ನಿಸುವವರಾರು? 5ರಾಜಾಜ್ಞೆಯನ್ನು ಪಾಲಿಸುವವನಿಗೆ ಕೇಡು ಸಂಭವಿಸದು. ಅದನ್ನು ಯಾವಾಗ, ಹೇಗೆ ಪಾಲಿಸಬೇಕೆಂದು ಜ್ಞಾನಿಗೆ ಮನದಟ್ಟಾಗಿರುತ್ತದೆ. 6ಪ್ರತಿಯೊಂದು ಕಾರ್ಯಕ್ಕೆ ಒಂದು ಕಾಲ, ಒಂದು ಕ್ರಮ ಇರುತ್ತದೆಯಲ್ಲವೆ? ಮನುಷ್ಯನು ಎದುರಿಸಬೇಕಾದ ಕಷ್ಟಕಾರ್ಪಣ್ಯಗಳು ಘನತರವಾದುವು. 7ಮುಂದೆ ಆಗುವುದೇನು ಎಂಬುದು ಅವನಿಗೆ ಗೊತ್ತಿಲ್ಲ; ಅದು ಹೇಗೆ ಸಂಭವಿಸುವುದು ಎಂದು ಅವನಿಗೆ ತಿಳಿಸಬಲ್ಲವರು ಯಾರೂ ಇಲ್ಲ. 8ಆತ್ಮವನ್ನು ತಡೆಯುವ ಶಕ್ತಿ ಯಾರಿಗೂ ಇಲ್ಲ. ಹಾಗೆಯೇ ತಮ್ಮ ಮರಣ ದಿನವನ್ನು ತಡೆಯುವ ಶಕ್ತಿ ಯಾರಿಗೂ ಇಲ್ಲ. ಸಾವೆಂಬ ಸಮರಕ್ಕೆ ವಿರಾಮವಿಲ್ಲ; ಅಂತೆಯೇ ದುಷ್ಟತನದ ಮೂಲಕ ಅದರಿಂದ ತಪ್ಪಿಸಿಕೊಳ್ಳಲಾಗದು.

### ಸಜ್ಜನರು ಮತ್ತು ದುರ್ಜನರು

9 ಈ ಲೋಕದಲ್ಲಿ ನಡೆಯುವ ಆಗುಹೋಗುಗಳನ್ನೆಲ್ಲ ಚಿಂತಿಸಿ ನೋಡಿದಾಗ ಈ ವಿಷಯಗಳು ಕಂಡುಬಂದವು: ಈಗ ಒಬ್ಬನು ಮತ್ತೊಬ್ಬನ ಮೇಲೆ ದಬ್ಬಾಳಿಕೆ ನಡೆಸುತ್ತಾನೆ; ಹಾನಿಯನ್ನು ಉಂಟು ಮಾಡುತ್ತಾನೆ. 10ಇದಲ್ಲದೆ ದುರ್ಜನರು ಸತ್ತು ಸಮಾಧಿಯಾಗುವುದನ್ನು ನೋಡಿದ್ದೇನೆ. ಸಜ್ಜನರು ಆ ಪವಿತ್ರ ಸ್ಥಾನದಿಂದ ಹೊರಟು ಬಂದು ಆ ದುರ್ಜನರ ನಡತೆಯನ್ನು ಅವರಿದ್ದ ಪಟ್ಟಣದಲ್ಲೇ ಹೊಗಳುತ್ತಾರೆ! ಇದು ನಿರರ್ಥಕ.

11 ಕೆಟ್ಟದ್ದನ್ನು ಮಾಡಲು ನರಮಾನವರು ತುಂಬ ಆಸಕ್ತಿ ಉಳ್ಳವರಾಗಿದ್ದಾರೆ. ಕೇಡಿಗೆ ತಕ್ಕ ದಂಡನೆಯನ್ನು ಕೂಡಲೆ ವಿಧಿಸದಿರುವುದೇ ಇದಕ್ಕೆ ಕಾರಣ. 12ಪಾಪಾತ್ಮನು ನೂರು ಸಾರಿ ಕೆಟ್ಟದ್ದನ್ನು ಮಾಡಿ ದೀರ್ಘಕಾಲ ಬದುಕಿದರೂ ದೇವರಿಗೆ ಹೆದರಿ ಭಯಭಕ್ತಿಯುಳ್ಳವರಿಗೆ ಒಳ್ಳೆಯದೇ ಆಗುವುದೆಂದು ಬಲ್ಲೆನು. 13ದೇವರಿಗೆ ಹೆದರದ ದುರ್ಜನನಿಗೆ ಒಳ್ಳೆಯದಾಗದೆಂಬುದು ನಿಶ್ಚಯ. ನೆರಳಿನಂತಿರುವ ಅವನ ಬಾಳಿನ ದಿನಗಳು ಹೆಚ್ಚುವುದಿಲ್ಲ. 14ಲೋಕದಲ್ಲಿ ನಡೆಯುವ ನಿರರ್ಥಕ ಕಾರ್ಯ ಒಂದುಂಟು: ದುರ್ಜನರ ನಡತೆಗೆ ಆಗಬೇಕಾದ ತಕ್ಕ ಶಿಕ್ಷೆ ಸಜ್ಜನರಿಗೆ ಆಗುತ್ತದೆ. ಸಜ್ಜನರಿಗೆ ಸಿಗಬೇಕಾದ ಸಂಭಾವನೆ ದುರ್ಜನರಿಗೆ ಸಿಗುತ್ತದೆ. ಇದು ನಿರರ್ಥಕವೆಂದೇ ಹೇಳುತ್ತೇನೆ.

15 ಆದುದರಿಂದಲೇ ಸಂತೋಷವನ್ನು ಶ್ಲಾಘಿಸುತ್ತೇನೆ. ಮನುಷ್ಯನು ಅನ್ನಪಾನಗಳನ್ನು ಸೇವಿಸಿ ಸಂತೋಷಪಡುವುದಕ್ಕಿಂತ ಮೇಲಾದುದು ಅವನಿಗೆ ಈ ಲೋಕದಲ್ಲಿ ಇನ್ನಾವುದೂ ಇಲ್ಲ. ದೇವರು ಅವನಿಗೆ ಇಹದಲ್ಲಿ ಅನುಗ್ರಹಿಸುವ ಜೀವಾವಧಿಯಲ್ಲಿ ಅವನು ಪಡುವ ಪ್ರಯಾಸಕ್ಕೆ ಸುಖಾನುಭವ ಸೇರಿರುತ್ತದೆ.

16 ನಾನು ಜ್ಞಾನವನ್ನು ಪಡೆಯಲು, ಜಗದಲ್ಲಿ ನಡೆಯುವುದನ್ನು ಅರಿತುಕೊಳ್ಳಲು ಪ್ರಯತ್ನಿಸಿದಾಗ ಇದು ನನಗೆ ಮನದಟ್ಟಾಯಿತು: ಒಬ್ಬನು ರಾತ್ರಿ ಹಗಲು, ಕಣ್ಣುಗಳಿಗೆ ನಿದ್ರೆ ಹಚ್ಚಗೊಡದೆ ಪರಿಶೀಲಿಸಿದರೂ ದೇವರ ಕಾರ್ಯವನ್ನು ಅರ್ಥಮಾಡಿಕೊಳ್ಳಲು ಆಗದು. 17ಎಷ್ಟು ಪ್ರಯಾಸಪಟ್ಟು ವಿಚಾರಿಸಿದರೂ ಅವನಿಂದ ಸಾಧ್ಯವಾಗದು. ಹೌದು, ಜ್ಞಾನಿ ತನ್ನಿಂದಾಗುತ್ತದೆ ಎಂದು ಹೇಳಿಕೊಳ್ಳಬಹುದು; ಆದರೆ ಅವನಿಂದಲೂ ಅದು ಸಾಧ್ಯವಾಗದು.

**9** ನಾನು ಇವೆಲ್ಲವನ್ನು ಪರ್ಯಾಲೋಚಿಸಿ ಇದನ್ನು ಮನಗಂಡೆ: ಸತ್ಪುರುಷರ ಹಾಗೂ ಸುಜ್ಞಾನಿಗಳ ಕಾರ್ಯಗಳೆಲ್ಲವೂ ದೇವರ ಕೈಯಲ್ಲಿವೆ. ತಾವು ಪ್ರೀತಿಗೆ ಪಾತ್ರರೋ ದ್ವೇಷಕ್ಕೆ ಅರ್ಹರೋ ಮಾನವರಿಗೆ ತಿಳಿಯದು. ಮುಂದೆ ಏನು ಕಾದಿದೆ ಎಂಬುದು ಯಾರಿಗೂ ಗೊತ್ತಿಲ್ಲ. 2ಎಲ್ಲವೂ ಎಲ್ಲರಿಗೂ ಒಂದೇ ಬಗೆಯಾಗಿ ಸಂಭವಿಸುವುದು; ಸಜ್ಜನನಿಗೂ ದುರ್ಜನನಿಗೂ, ಒಳ್ಳೆಯವನಿಗೂ (ಕೆಟ್ಟವನಿಗೂ), ಶುದ್ಧನಿಗೂ, ಅಶುದ್ಧನಿಗೂ ಬಲಿಯನ್ನರ್ಪಿಸುವವನಿಗೂ ಅರ್ಪಿಸದವನಿಗೂ ಒಂದೇ ಗತಿ ಕಾದಿದೆ; ನಿರ್ದೋಷಿಯಂತೆ ದೋಷಿಯೂ ಇರುವನು; ಆಣೆಯಿಡುವವನ ಹಾಗೆ ಆಣೆಗೆ ಅಂಜುವವನೂ ಇರುವನು. 3ಎಲ್ಲರಿಗೂ ಒಂದೇ ಗತಿಯೆಂಬ ಸಂಕಟವು ಲೋಕ ವ್ಯವಹಾರಗಳಲ್ಲೆಲ್ಲಾ ಸೇರಿಕೊಂಡಿದೆ. ಇದಲ್ಲದೆ, ನರಮಾನವರ ಎದೆಯಲ್ಲಿ ಕೆಟ್ಟತನ ತುಂಬಿದೆ; ಅವರು ಬದುಕಿರುವ ತನಕ ಮರುಳುತನ ಅವರ ಮನಸ್ಸನ್ನು ಸೆರೆಹಿಡಿದಿರುತ್ತದೆ. ಆನಂತರ ಸತ್ತವರನ್ನು ಸೇರಿಕೊಳ್ಳುತ್ತಾರೆ. 4ಜೀವಿತರ ಗುಂಪಿಗೆ ಸೇರಿದವನಿಗೆ ನಂಬಿಕೆ–ನಿರೀಕ್ಷೆಯುಂಟು; ಸತ್ತ ಸಿಂಹಕ್ಕಿಂತ ಬದುಕಿರುವ ನಾಯಿಯೇ ಲೇಸು. 5ಜೀವಿತರಿಗೆ ಖಂಡಿತವಾಗಿ ಸಾಯುತ್ತೇವೆಂಬ ತಿಳುವಳಿಕೆಯಾದರೂ ಉಂಟು. ಸತ್ತವರಿಗಾದರೋ ಯಾವ ತಿಳುವಳಿಕೆಯೂ ಇಲ್ಲ; ಅವರಿಗೆ ಇನ್ನು ಮೇಲೆ ಯಾವ ಪ್ರತಿಫಲವೂ ಇಲ್ಲ; ಅವರ ಹೆಸರನ್ನೂ ಜನರು ಮರೆತುಬಿಡುತ್ತಾರೆ. 6ಅವರ ಪ್ರೀತಿ, ದ್ವೇಷ, ಮತ್ಸರ, ಅವರು ಸತ್ತಾಗಲೇ ಅಳಿದು ಹೋಗುತ್ತವೆ. ಇಹಲೋಕದಲ್ಲಿ ನಡೆಯುವ ಯಾವುದರಲ್ಲೂ ಅವರಿಗೆ ಇನ್ನೆಂದಿಗೂ ಪಾಲಿರುವುದಿಲ್ಲ.

7 ಹೋಗು, ನಿನ್ನ ಅನ್ನವನ್ನು ಸಂತೋಷದಿಂದ ತಿನ್ನು; ದ್ರಾಕ್ಷಾರಸವನ್ನು ಉಲ್ಲಾಸದಿಂದ ಕುಡಿ; ದೇವರು ನಿನ್ನ ನಡತೆಯನ್ನು ಈಗಾಗಲೇ ಮೆಚ್ಚಿಕೊಂಡಿದ್ದಾರೆ. 8ನಿನ್ನ ಬಟ್ಟೆಗಳು ಬೆಳ್ಳಗಿರಲಿ, ತಲೆಗೆ ಎಣ್ಣೆಯ ಕೊರತೆ ಇಲ್ಲದಿರಲಿ. 9ಲೋಕದಲ್ಲಿ ದೇವರು ವಿಧಿಸಿರುವ ಈ ನಿರರ್ಥಕ ಜೀವಮಾನದ ನಿರರ್ಥಕ ದಿನದಿನವೂ ನಿನ್ನ ಪ್ರಿಯ ಪತ್ನಿಯೊಡನೆ ಸುಖದಿಂದ ಬದುಕು; ಇಹಲೋಕದ ನಿನ್ನ ಬಾಳಿನಲ್ಲಿ ನೀನು ಪಡುವ ಪಾಡಿಗೆ ಇದೇ ನಿನ್ನ ಪಾಲಿಗೆ ಬಂದ ಪಂಚಾಮೃತ. 10ನಿನ್ನ ಕೈಗೆ ಸಿಕ್ಕಿದ ಕೆಲಸವನ್ನೆಲ್ಲ ಪೂರ್ಣಶಕ್ತಿಯಿಂದ ಮಾಡು. ಏಕೆಂದರೆ ನೀನು ಹೋಗಲಿಕ್ಕಿರುವ ಪಾತಾಳದಲ್ಲಿ ಯಾವ ಕೆಲಸವೂ ಯೋಜನೆಯೂ ತಿಳುವಳಿಕೆಯೂ ಜ್ಞಾನವೂ ಇರುವುದಿಲ್ಲ.

11 ಲೋಕದಲ್ಲಿ ನಾನು ಇನ್ನೊಂದು ವಿಷಯವನ್ನು ಗಮನಿಸಿದೆ; ಓಟ ಪಂದ್ಯದಲ್ಲಿ ವೇಗವಾಗಿ ಓಡುವವನೇ ಯಾವಾಗಲೂ ಗೆಲ್ಲುವನು ಎನ್ನುವಂತಿಲ್ಲ; ಬಲಿಷ್ಠರಿಗೇ ಯುದ್ಧದಲ್ಲಿ ಜಯಗಿಟ್ಟುತ್ತದೆ

ಎನ್ನುವಹಾಗಿಲ್ಲ. ಜ್ಞಾನಿಗೆ ಜೀವನಾಂಶ ದೊರಕುವುದು, ಜಾಣನಿಗೆ ಹಣ ಲಭಿಸುವುದು, ಪ್ರವೀಣನಿಗೆ ಪಟ್ಟಪದವಿ ಸಿಕ್ಕುವುದು ಎನ್ನುವಂತಿಲ್ಲ. ಇವರೆಲ್ಲರೂ ಸಮಯ ಸಂದರ್ಭಗಳಿಗೆ ಒಳಪಟ್ಟಿರುತ್ತಾರೆ.

12 ತನ್ನ ನಿಶ್ಚಿತಕಾಲ ಯಾವಾಗ ಬರುವುದೆಂದು ಮಾನವನಿಗೆ ತಿಳಿಯದು. ಮೀನುಗಳು ಮೋಸಬಲೆಗೂ, ಹಕ್ಕಿಗಳು ಉರುಲುಬಲೆಗೂ, ಸಿಕ್ಕಿ ಬೀಳುವಂತೆ ನರಮಾನವರು ತಮ್ಮ ಮೇಲೆ ತಟ್ಟನೆ ಬೀಳುವ ಕಾಲಪಾಶಕ್ಕೆ ಸಿಕ್ಕಿಕೊಳ್ಳುತ್ತಾರೆ.

## ಜ್ಞಾನ ಕುರಿತ ಚಿಂತನೆ

13 ಲೋಕದಲ್ಲಿ ನಾನು ಜ್ಞಾನವನ್ನು ಈ ವಿಧವಾಗಿ ಮನಗಂಡೆ: ಅದು ನನ್ನ ದೃಷ್ಟಿಗೆ ದೊಡ್ಡದಾಗಿ ಕಾಣಿಸಿತು. 14ಇಗೋ, ಒಂದು ಚಿಕ್ಕಪಟ್ಟಣ. ಅದರಲ್ಲಿ ಕೆಲವೇ ನಿವಾಸಿಗಳು. ಬಲಿಷ್ಠನಾದ ಅರಸ ಅದಕ್ಕೆ ಮುತ್ತಿಗೆಹಾಕಿದ. ಅದರ ಸುತ್ತಲು ದೊಡ್ಡ ಕೋಟೆ ಎಬ್ಬಿಸಿದ. 15ಆಗ ಅಲ್ಲಿದ್ದವರು ತಮ್ಮಲ್ಲೇ ಒಬ್ಬ ಜ್ಞಾನಿಯನ್ನು ಕಂಡುಹಿಡಿದರು. ಅವನು ತನ್ನ ಜ್ಞಾನದಿಂದಲೇ ಆ ಪಟ್ಟಣವನ್ನು ರಕ್ಷಿಸಿದ. ಆದರೆ ಆ ಬಡಜ್ಞಾನಿಯನ್ನು ಆಮೇಲೆ ಯಾರೂ ಸ್ಮರಿಸಲಿಲ್ಲ. 16ಇದನ್ನು ನೋಡಿದ ನಾನು, ಶಕ್ತಿಗಿಂತ ಜ್ಞಾನವೇ ಶ್ರೇಷ್ಠ; ಆದರೆ ಜನರು ಆ ಬಡವನ ಜ್ಞಾನವನ್ನು ತಾತ್ಸಾರ ಮಾಡುತ್ತಾರೆ, ಅವನ ಮಾತುಗಳನ್ನು ಗಮನಿಸುವುದಿಲ್ಲ, ಎಂದುಕೊಂಡೆ. 17ಹುಚ್ಚರ ಕೂಟದಲ್ಲಿ ಕೇಳಿಬರುವ ಅಧ್ಯಕ್ಷನ ಕೂಗಾಟಕ್ಕಿಂತ ಜ್ಞಾನಿಯ ಮೆಲ್ಲನೆಯ ಮಾತು ಕಿವಿಗೆ ಲೇಸು. 18ಯುದ್ಧಾಯುಧಗಳಿಗಿಂತ ಜ್ಞಾನವೇ ಉತ್ತಮ; ಆದರೆ ಒಬ್ಬನೇ ಒಬ್ಬ ಪಾಪಿ ಸಾಕು ಪುಣ್ಯಕೋಟೆಯನ್ನು ಹಾಳುಮಾಡಲು !

## ಹುಚ್ಚುತನದ ಚಿಹ್ನೆಗಳು

**10** ಸತ್ತ ನೊಣಗಳಿಂದ ಗಂದಿಗನ ತೈಲ ಕೂಡ ನಾರುತ್ತದೆ. ಅಂತೆಯೇ ಹುಚ್ಚುತನ ಕೊಂಚವಾದರೂ ಜ್ಞಾನಮಾನಗಳನ್ನು ಕೆಡಿಸಿ ಬಿಡುತ್ತದೆ.

2 ಜ್ಞಾನಿಯ ಬುದ್ಧಿ ಬಲಗೈಯಾದರೆ ಅಜ್ಞಾನಿಯ ಬುದ್ಧಿ ಎಡಗೈ. 3ಬುದ್ಧಿತಪ್ಪಿ ತಿರುಗಾಡುವ ಹುಚ್ಚನು ದಾರಿಯಲ್ಲೆಲ್ಲಾ ತನ್ನ ಹುಚ್ಚುತನವನ್ನು ಪ್ರಕಟ ಮಾಡುತ್ತಾನೆ.

4 ರಾಜನು ಸಿಟ್ಟುಗೊಂಡನೆಂದು ಉದ್ಯೋಗಕ್ಕೇ ರಾಜೀನಾಮೆ ಕೊಟ್ಟುಬಿಡಬೇಡ; ತಾಳ್ಮೆಯಿಂದ ಘನದೋಷಗಳನ್ನೂ ಅಳಿಸಬಹುದು.

5 ಲೋಕದಲ್ಲಿ ನಾನು ಮತ್ತೊಂದು ಅನ್ಯಾಯವನ್ನು ಕಂಡೆ. ಅದು ಅಧಿಪತಿಗಳ ತಪ್ಪಿನಿಂದಾದುದು. 6ಅದು ಯಾವುದೆಂದರೆ, ಮೂಢರನ್ನು ಮಹಾಪದವಿಗೆ ಏರಿಸುತ್ತಾರೆ; ಘನವಂತರನ್ನು ಹೀನಸ್ಥಿತಿಯಲ್ಲಿ ಇರಿಸುತ್ತಾರೆ. 7ಗುಲಾಮನು ಕುದುರೆ ಸವಾರಿ ಮಾಡುವುದನ್ನೂ ಯಜಮಾನನು ಮನೆಯಾಳಂತೆ ನೆಲದ ಮೇಲೆ ನಡೆಯುವುದನ್ನೂ ನೋಡಿದ್ದೇನೆ.

8 ತಾನು ತೋಡಿದ ಗುಂಡಿಯಲ್ಲಿ ತಾನೇ ಬೀಳುವನು; ಗೋಡೆ ಒಡೆಯುವವನನ್ನು ಹಾವು ಕಡಿಯುವುದು. 9ಬಂಡೆ ಸೀಳುವವನು ಬಂಡೆಯಿಂದಲೇ ಗಾಯಗೊಳ್ಳುವನು; ಮರಕಡಿಯುವವನು ಅದರಿಂದಲೇ ಅಪಾಯಕ್ಕೆ ಗುರಿಯಾಗುವನು. 10ಮೊಂಡುಕೊಡಲಿಯ ಬಾಯನ್ನು ಮೊನೆಮಾಡದಿದ್ದರೆ ಹೆಚ್ಚು ಬಲಪ್ರಯೋಗ ಮಾಡಬೇಕಾಗುವುದು. ಕಾರ್ಯಸಿದ್ಧಿಗೆ ಜ್ಞಾನವೇ ಸಾಧನ. 11ಹಾವಾಡಿಗ ಹಾವಾಡಿಸುವುದಕ್ಕೆ ಮುಂಚೆಯೇ ಹಾವಿನಿಂದ ಕಡಿಸಿಕೊಂಡರೆ ಏನು ಪ್ರಯೋಜನ? 12–13ಜ್ಞಾನಿಯ ಮಾತು ಹಿತಕರ; ಅಜ್ಞಾನಿಯ ಮಾತು ಅವನಿಗೆ ವಿನಾಶಕರ. ಅದು ಬುದ್ಧಿಹೀನತೆಯಿಂದ ಆರಂಭವಾಗುತ್ತದೆ. ಮೋಸ, ಮರುಳುತನದಲ್ಲಿ ಮುಕ್ತಾಯಗೊಳ್ಳುತ್ತದೆ. 14ಅಜ್ಞಾನಿ ಮಾತಿನ ಮಲ್ಲ.

ಭವಿಷ್ಯತನ್ನು ಮಾನವ ತಿಳಿಯನು; ತಾನು ಕಾಲವಾದ ಮೇಲೆ ಏನಾಗುವುದೆಂದು ಅವನು ಯಾರಿಂದ ತಿಳಿಯಬಲ್ಲನು?

15 ಪಟ್ಟಣಕ್ಕೆ ದಾರಿತಿಳಿಯದವನಿಗೆ ಮೂಢರು ತಿಳಿಸಲು ಪಡುವ ಪ್ರಯಾಸ ಕೇವಲ ಆಯಾಸ.

16 ಓ ನಾಡೇ, ನಿನ್ನ ಒಡೆಯ ಬಾಲಕನಾಗಿದ್ದು ನಿನ್ನ ನಾಯಕರೆಲ್ಲರು ಹೊತ್ತಾರೆಯೇ ಔತಣಕ್ಕೆ ಕುಳಿತುಕೊಳ್ಳುವಂಥವರಾಗಿದ್ದಾರೆ, ಅದು ನಿನ್ನ ದೌರ್ಭಾಗ್ಯವೇ ಸರಿ. 17ನಾಡೇ, ನಿನ್ನ ಒಡೆಯ ಕುಲೀನನಾಗಿದ್ದು, ನಿನ್ನ ನಾಯಕರೆಲ್ಲ ಸಕಾಲದಲ್ಲಿ ಊಟಮಾಡಿ, ಕುಡುಕರಾಗುವುದರ ಬದಲು ಶಕ್ತಿಯುತರಾದರೆ, ಅದು ನಿನ್ನ ಸೌಭಾಗ್ಯವೇ ಸರಿ.

18 ಮೈಗಳ್ಳನ ಮನೆ ಅಂಕುಡೊಂಕಾಗಿರುತ್ತದೆ; ಸೋಮಾರಿಯ ಸೂರು ಸೋರುತ್ತಿರುತ್ತದೆ.

19 ವಿನೋದಕ್ಕಾಗಿ ಔತಣ, ಆನಂದಕ್ಕಾಗಿ ಮದ್ಯಪಾನ; ಎಲ್ಲವನ್ನು ಒದಗಿಸಿಕೊಡುವುದಕ್ಕಾಗಿ ಹಣ.

20 ಅರಸನನ್ನು ಮನಸ್ಸಿನಲ್ಲೂ ನಿಂದಿಸಬೇಡ; ಧನಿಕನನ್ನು ಮಲಗುವ ಕೋಣೆಯಲ್ಲೂ ದೂಷಿಸಬೇಡ; ಆಕಾಶದ ಹಕ್ಕಿ ಆ ಸುದ್ಧಿಯನ್ನು ಮುಟ್ಟಿಸೀತು; ಹಾರುವ ಪಕ್ಷಿ ಆ ಸಮಾಚಾರವನ್ನು ತಿಳಿಸೀತು!

### ಜ್ಞಾನಿಯ ನಡವಳಿಕೆ

**11** ನಿನ್ನ ಆಹಾರ ಧಾನ್ಯವನ್ನು ಹೊರ ನಾಡಿನ ವ್ಯಾಪಾರಕ್ಕೆ ಹಾಕು. ಬಹುದಿನದ ಮೇಲೆ ಅದು ಬಡ್ಡಿ ಸಮೇತ ನಿನಗೆ ಸಿಕ್ಕುವುದು. 2ನಿನ್ನ ಹಣವನ್ನು ವಿಭಾಗಿಸಿ ಏಳೆಂಟು ಸ್ಥಳಗಳಲ್ಲಿ ಇಡು. ಏಕೆಂದರೆ ಎಲ್ಲಿ, ಎಂಥ ಕೇಡು ಸಂಭವಿಸಬಹುದೆಂದು ನಿನಗೆ ತಿಳಿಯದು.

3 ಮಳೆ ತುಂಬಿದ ಮೋಡಗಳು ನೆಲದ ಮೇಲೆ ಸುರಿದು ಬಿಡುತ್ತವೆ. ಮರವು ದಕ್ಷಿಣದ ಕಡೆಗಾಗಲಿ, ಉತ್ತರದ ಕಡೆಗಾಗಲಿ ಉರುಳಿದರೆ ಬಿದ್ದ ಕಡೆಯಲ್ಲೆ ಬಿದ್ದಿರುತ್ತದೆ. 4ಗಾಳಿಗಾಗಿಯೇ ಕಾದಿರುವವನು, ಮೋಡಕ್ಕಾಗಿಯೇ ಎದುರು ನೋಡುತ್ತಿರುವವನು ಎಂದಿಗೂ ಬೀಜಬಿತ್ತಲಾರನು; ಎಂದಿಗೂ ಪೈರು ಕೊಯ್ಯಲಾರನು. 5ಗಾಳಿಯ ಚಲನೆಯನ್ನಾಗಲಿ ಗರ್ಭಿಣಿಯ ಭ್ರೂಣದ ಬೆಳವಣಿಗೆಯನ್ನಾಗಲಿ ನಿನ್ನಿಂದ ತಿಳಿಯಲಾಗದು. ಅಂತೆಯೇ ಸರ್ವೇಶ್ವರನಾದ ದೇವರ ಕಾರ್ಯವನ್ನು ನಿನ್ನಿಂದ ಗ್ರಹಿಸಲಾಗದು. 6ಮುಂಜಾನೆಯಲ್ಲೇ ಬೀಜಬಿತ್ತು; ಸಂಜೆಯಲ್ಲೂ ನಿನ್ನ ಕೈಗೆ ಬಿಡುವುಕೊಡಬೇಡ; ಇದು ಸಫಲವೋ ಅದು ಸಫಲವೋ ನಿನ್ನಿಂದ ಹೇಳಲಾಗದು. ಒಂದು ವೇಳೆ ಎರಡೂ ಒಳ್ಳೆಯ ಬೆಳೆಯನ್ನು ಕೊಡಬಹುದು.

7 ಬೆಳಕು ಬಹಳ ಇಂಪು; ಸೂರ್ಯನ ಕಾಂತಿ ಕಣ್ಣುಗಳಿಗೆ ಸೊಂಪು. ಮಾನವನು ಎಷ್ಟೇ ಧೀರ್ಘಕಾಲ ಬದುಕಿರಲಿ ತನ್ನ ಬಾಳಿನ ದಿನಗಳಲ್ಲೆಲ್ಲಾ ಆನಂದಿಸಲಿ; ಆದರೆ ಅಂಧಕಾರದ ದಿನಗಳು ಸಹ ಬಹಳ ಇವೆ ಎಂಬುದನ್ನು ನೆನಪಿಗೆ ತಂದುಕೊಳ್ಳಲಿ. ಆ ಬಳಿಕ ಬರುವುದೆಲ್ಲಾ ನಿರರ್ಥಕ.

### ಯುವ ಜನರಿಗೆ ಹಿತವಚನ

8–9 ಯುವಕನೇ, ಯೌವನದಲ್ಲಿ ಆನಂದಿಸು. ಯೌವನ ದಿನಗಳಲ್ಲಿ ಹೃತ್ಪೂರ್ವಕವಾಗಿ ಸಂತೋಷಿಸು. ಮನಸ್ಸಿಗೆ ತಕ್ಕಂತೆಯೂ ಕಣ್ಣಿಗೆ ಸರಿಬೀಳುವ ಹಾಗೆಯೂ ನಡೆದುಕೊ. ಆದರೆ ಈ ಎಲ್ಲ ವಿಷಯಗಳಲ್ಲಿ ದೇವರು ನಿನ್ನನ್ನು ನ್ಯಾಯ ವಿಚಾರಣೆಗೆ ಗುರಿಮಾಡುವರೆಂಬುದನ್ನು ಮನದಲ್ಲಿಡು.

10 ನಿನ್ನ ಹೃದಯದಿಂದ ವ್ಯಥೆಯನ್ನೂ ನಿನ್ನ ದೇಹದಿಂದ ಯಾತನೆಯನ್ನೂ ದೂರಮಾಡು. ಯೌವನವೂ ಪ್ರಾಯವೂ ಬೇಗ ಮಾಯವಾಗುವುವು.

**12** ಆದುದರಿಂದ ಯೌವನದಲ್ಲಿ ನಿನ್ನ ಸೃಷ್ಟಿಕರ್ತನನ್ನು ಸ್ಮರಿಸಿಕೊ. ಕಷ್ಟಕರವಾದ ದಿನಗಳು ಬರುವುದಕ್ಕೆ ಮುನ್ನ, ಜೀವನ ಬೇಸರವಾಗಿದೆ ಎಂದು ನೀನು ಹೇಳುವುದಕ್ಕೆ ಮುಂಚೆ ಆತನನ್ನು ಸ್ಮರಿಸು. 2ಆ ಕಷ್ಟಕರವಾದ ದಿನಗಳಲ್ಲಿ ಸೂರ್ಯಚಂದ್ರನಕ್ಷತ್ರಗಳೂ ನಿನಗೆ ಮೊಬ್ಬಾಗುವುವು. ಮಳೆಯಾದ ಮೇಲೂ ಮೋಡಗಳು ಮತ್ತೆ ಬರುವುವು; 3ಬಲಿಷ್ಠವಾಗಿದ್ದ ನಿನ್ನ ಕಾಲುಗಳು ಬಗ್ಗುವುವು; ಹಲ್ಲುಗಳು ಉದುರಿ ಅಗಿಯುವ ಕೆಲಸ ನಿಲ್ಲುವುದು; ಕಿಟಕಿಗಳಂಥ ಕಣ್ಣುಗಳು ಮಂಕಾಗುವುವು. 4ಕಿವಿಗಳು ಮಂದವಾಗಿ ಹಾದಿಬೀದಿಗಳ ಶಬ್ದವು ಕೇಳಿಸವು. ಬೀಸುವ ಶಬ್ದವು ತಗ್ಗಿ ಹಕ್ಕಿಯ ಶಬ್ದಗಳಷ್ಟು ಕಿರಿಯದಾಗುವುದು; ಬೀಸುವವರ ಹಾಡೆಲ್ಲಾ ಕುಗ್ಗಿ ಹೋಗುವುದು; 5ದಾರಿಯಲ್ಲಿ ನಡೆವುದು ಅಪಾಯಕರವಾಗಿರುವುದು; ಹೂ

ಬಿಟ್ಟ ಬಾದಾಮಿ ಮರದಂತೆ ತಲೆಗೂದಲು ನರೆತುಬಿಡುವುದು, ಮಿಡತೆಯು ಕೂಡ ಭಾರವಾಗುವುದು; ಆಸೆ ಕುಂದಿಹೋಗುವುದು.

ನಿನ್ನ ನಿತ್ಯಗೃಹಕ್ಕೆ ತೆರಳಿರುವೆ, ಗೋಳಾಟದವರು ಬೀದಿಯಲ್ಲಿ ಕಾಣಿಸಿಕೊಳ್ಳುವರು, 6ಬೆಳ್ಳಿಯ ಸರ ಕಿತ್ತುಹೋಗುವುದು, ಚಿನ್ನದಬಟ್ಟಲು ಜಜ್ಜಿ ಹೋಗುವುದು; ಮಡಕೆ ಬುಗ್ಗೆಯ ಹತ್ತಿರವೆ ಒಡೆಯುವುದು, ಬಾವಿಯ ರಾಟೆ ಮುರಿಯುವುದು. 7ಮಣ್ಣಿನ ದೇಹ ತನ್ನ ಭೂಮಿಗೆ ಸೇರಿ ಹೋಗುವುದು; ಆತ್ಮವು ತನ್ನನ್ನು ದಯಪಾಲಿಸಿದ ದೇವರ ಬಳಿಗೆ ಸೇರುವುದು, (ಇಷ್ಟರೊಳಗೆ ನಿನ್ನ ಸೃಷ್ಟಿಕರ್ತನನ್ನು ಸ್ಮರಿಸದಿರಬೇಡ).

8 “ವ್ಯರ್ಥವೇ ವ್ಯರ್ಥ ! ಸಮಸ್ತವೂ ವ್ಯರ್ಥ! !” ಎನ್ನುತ್ತಾನೆ ಉಪದೇಶಕ.

**ಹಿನ್ನುಡಿ**

9 ಉಪದೇಶಕನು ಜ್ಞಾನಿಯಾಗಿದ್ದ; ಜನರಿಗೆ ತಿಳುವಳಿಕೆಯನ್ನು ಬೋಧಿಸುತ್ತಾ ಬಂದ. ಅನೇಕಾನೇಕ ಜ್ಞಾನೋಕ್ತಿಗಳನ್ನು ಧ್ಯಾನಿಸಿ, ಪರೀಕ್ಷಿಸಿ, ಕ್ರಮಪಡಿಸಿದ. 10ಹಿತಕರವಾದ ವಚನಗಳನ್ನು ಅವನು ಹುಡುಕಿ ಆರಿಸಿದ; ಅವನಿಂದ ರಚಿತವಾದವು ಸರಿಯಾದುವು, ಸತ್ಯವಾದುವು.

11 ಜ್ಞಾನಿಗಳ ನುಡಿಗಳು ಮೊನೆಗೋಲುಗಳು, ಅವರು ಸಂಗ್ರಹಿಸಿದ ವಚನಗಳು ಬಿಗಿಯಾಗಿ ಜಡಿದ ಮೊಳೆಗಳು. ಅವುಗಳ ಮೂಲಕರ್ತನು ಎಲ್ಲರ ಏಕೈಕ ಮೇಷಪಾಲ.

12 ಕುಮಾರಾ, ಇವುಗಳಲ್ಲದೆ ನೀನು ಎಚ್ಚರಿಕೆಯಿಂದಿರಬೇಕಾದುವು ಇನ್ನೂ ಇವೆ. ಗ್ರಂಥಗಳ ರಚನೆಗೆ ಮಿತಿಯಿಲ್ಲ. ಅತಿಯಾದ ವ್ಯಾಸಂಗದಿಂದ ದೇಹಕ್ಕೆ ಆಯಾಸ.

13 ವಿಷಯ ಮುಗಿಯಿತು; ಎಲ್ಲವನ್ನೂ ಕೇಳಿ ಆಯಿತು. ದೇವರಿಗೆ ಭಯಪಟ್ಟು ಅವರ ಆಜ್ಞೆಗಳನ್ನು ಕೈಗೊಳ್ಳು. ಇದೇ ಪ್ರತಿಯೊಬ್ಬ ಮಾನವನ ಕರ್ತವ್ಯ. 14ದೇವರು ಎಲ್ಲ ಕಾರ್ಯಗಳನ್ನು, ರಹಸ್ಯವಾದುವುಗಳನ್ನು ಕೂಡ, ಅವು ಒಳ್ಳೆಯದಾಗಿರಲಿ, ಕೆಟ್ಟದಾಗಿರಲಿ, ನ್ಯಾಯವಿಚಾರಣೆಗೆ ಗುರಿಮಾಡುವರು.